ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 118

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಬುಧವಾರ: 15-04-2026

## ಡಾ.ಬಿ.ಆರ್.ಅಂಬೇಡ್ಕರ್ ಅವರ ಆದರ್ಶಗಳನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕು: ಶಾಸಕ ಡಾ.ಶಿವರಾಜ ಪಾಟೀಲ್

ಧೈರ್ಯದ ದಾರಿ

**ರಾಯಚೂರು:** ಜಗತ್ತಿನ ಶ್ರೇಷ್ಠ ಜ್ಞಾನಿಯಾಗಿದ್ದ ಅಂಬೇಡ್ಕರ್ ಅವರು ತಮ್ಮ ಪ್ರತಿಭೆಯನ್ನು ಮನುಕುಲದ ಉದ್ಧಾರಕ್ಕಾಗಿ ಮುಡಿಪಾಗಿಟ್ಟರು. ಅವರ ಆದರ್ಶಗಳನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕೆಂದು ರಾಯಚೂರು ನಗರದ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಹೇಳಿದರು.
ಏಪ್ರಿಲ್ 14ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಗತ್ತಿನಲ್ಲಿ ಶಾಂತಿಯುತ, ಸಮೃದ್ಧಿಯಾಗಿ ಯಾವುದಾದರೂ ದೇಶ ಇದ್ದಾರೆ. ಅದು ಭಾರತ ದೇಶವಾಗಿದೆ. ಇದಕ್ಕೆ ಮೂಲಕಾರಣ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾರತ ಸಂವಿಧಾನವಾಗಿದೆ. ವಿದ್ಯಾರ್ಥಿಗಳು ಅಚ್ಚುಕಟ್ಟಾಗಿ ಓದಬೇಕು. ವಿದ್ಯಾರ್ಥಿಗಳಿಗೆ ಡಾ.ಬಿ.ಆರ್.ಅಂಬೇಡ್ಕರ್ ಅವರು ಪ್ರೇರಣೆಯಾಗಬೇಕೆಂದರು.

ಪ್ರಭಾರಿ ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ವ್ಯಕ್ತಿತ್ವ ಬಹಳ ದೊಡ್ಡದಾಗಿತ್ತು. ಸಂವಿಧಾನ, ಕಾನೂನು, ಆರ್ಥಿಕ ವಿಷಯಗಳಲ್ಲಿ ತಂಜ್ಞರಾಗಿ ಮಾತ್ರವಲ್ಲದೇ ಪ್ರಪಂಚದ ಎಲ್ಲಾ ವಿಷಯಗಳಲ್ಲಿ ಪರಿಣಿತರಾಗಿದ್ದರು. ಪ್ರತಿಯೊಬ್ಬರೂ ಅವರ ತೋರಿಸಿದ ಮಾರ್ಗದಲ್ಲಿ ನಡೆಯಬೇಕು. ಆಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.




ಕಾರ್ಯಕ್ರಮದ ಉಪನ್ಯಾಸಕರಾಗಿ ಕುವೆಂಪು ಕನ್ನಡ ಅಧ್ಯಯನ ಕುಪ್ಪಳ್ಳಿ ಮತ್ತು ಹಿರಿಯ ವಿದ್ವಾಂಸರಾದ ಡಾ.ಬಿ.ಎಂ.ಪುಟ್ಟಯ್ಯ ಅವರು ಮಾತನಾಡಿ, ಅಂಬೇಡ್ಕರ್ ಅವರ ಜಯಂತ್ಯೋತ್ಸವವನ್ನು ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಎನ್ನದೇ, ರಾಜಕೀಯ, ಸಂಸದೀಯ, ಪ್ರಜಾಪ್ರಭುತ್ವದ ದೃಷ್ಟಿಯಿಂದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಎಂದು ಕರೆಯಬೇಕು. ಅಂಬೇಡ್ಕರ್ ಸಂಶೋಧನಾ ಕೇಂದ್ರಗಳು, ಅಧ್ಯಯನ ಕೇಂದ್ರಗಳನ್ನು ಬಾಬಾ ಸಾಹೇಬ್ ಅಂಬೇಡ್ಕರ್ ಕೇಂದ್ರಗಳೆಂದು ಉಲ್ಲೇಖಿಸಬೇಕು. ಮತ್ತು ಎಲ್ಲಾ ಖಾಸಗಿ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರವನ್ನು ಇರಿಸಬೇಕೆಂದರು.

ಸಂವಿಧಾನದಲ್ಲಿ ಬಡವ-ಶ್ರೀಮಂತ ಎನ್ನದೆ ದೇಶದ ಪ್ರತಿ ವ್ಯಕ್ತಿಗೆ ಒಂದೇ ಮತದ ಹಕ್ಕು ನೀಡಲಾಗಿದೆ. ಲಿಂಗ, ಜಾತಿ, ಧರ್ಮ, ಬಾಷೆ ಆಧಾರಿತ ತಾರತಮ್ಯ ಮಾಡುವಂತಿಲ್ಲ. ಇದು ಪ್ರಜಾಪ್ರಭುತ್ವದ ವೈಶಿಷ್ಟ್ಯ. ತಂದೆ, ಪತ್ನಿ, ಕೊನೆಗೆ ಮಕ್ಕಳನ್ನು ಕಳೆದುಕೊಂಡರು ಅಂಬೇಡ್ಕರವರು ಈ ದೇಶದ ದೀನ ದಲಿತರ, ಬಡವರ, ಅಲ್ಪಸಂಖ್ಯಾತರ, ದಮನಿತರಿಗೆ ನ್ಯಾಯ ಕಲ್ಪಿಸಲು ಜೀವನ ಪರ್ಯಂತ ಹೋರಾಡಿದ ಮಹಾನ್ ಹೋರಾಟಗಾರ ಎಂದು ಬಣ್ಣಿಸಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ದ್ವಿತೀಯ ಪಿಯುಸಿಯಲ್ಲಿ ಅತಿಹೆಚ್ಚು ಅಂಕಗಳನ್ನು ಗಳಿಸಿದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಾದ ಸ್ನೇಹ, ಸಂಗೀತಾ ಹಾಗೂ ಗೀತಾ ಅವರಿಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಅಂಗವಾಗಿ ವಿವಿಧ ಗಣ್ಯರಿಂದ ಸನ್ಮಾನಿಸಿ, ಗೌರವಿಸಲಾಯಿತು.

ವಿವಿಧ ಗಣ್ಯರಿಂದ ಛಾಯಾಚಿತ್ರ ವೀಕ್ಷಣೆ: ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಅಂಗವಾಗಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ 2ನೇಪುಟಕ್ಕೆ

## ಮಾನ್ವಿ: ರಸ್ತೆ ಅಗಲೀಕರಣ ಕಾಮಗಾರಿಯಿಂದ ವಿದ್ಯುತ್ ವ್ಯತ್ಯಯ

**ಮಾನ್ವಿ, ಏಪ್ರಿಲ್ 14:** ಪಟ್ಟಣದ ಐಬಿ ರಸ್ತೆಯಿಂದ ಬಸವ ವೃತ್ತದವರೆಗೆ ನಡೆಯುತ್ತಿರುವ ರಸ್ತೆ ಅಗಲೀಕರಣ ಕಾಮಗಾರಿಯ ಹಿನ್ನಲೆ ವಿದ್ಯುತ್ ಸರಬರಾಜಿನಲ್ಲಿ ತಾತ್ಕಾಲಿಕ ವ್ಯತ್ಯಯ ಉಂಟಾಗಲಿದೆ ಎಂದು ವಿದ್ಯುತ್ ಇಲಾಖೆ ಪ್ರಕಟಣೆ ತಿಳಿಸಿದೆ.

ಪ್ರಕಟಣೆಯ ಪ್ರಕಾರ, ಏಪ್ರಿಲ್ 15, 2026ರಿಂದ ಏಪ್ರಿಲ್ 30, 2026ರವರೆಗೆ ರಸ್ತೆ ಅಗಲೀಕರಣ ಕಾಮಗಾರಿ ನಡೆಯುತ್ತಿರುವುದರಿಂದ ಪ್ರತಿದಿನ ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 5:00 ಗಂಟೆಯವರೆಗೆ ಐಬಿ ರಸ್ತೆದಿಂದ ಬಸವ ವೃತ್ತದವರೆಗೆ ಎಡ ಹಾಗೂ ಬಲ ಭಾಗಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಈ ಕಾಮಗಾರಿಯ ಸಮಯದಲ್ಲಿ ಸಾರ್ವಜನಿಕರು, ವ್ಯಾಪಾರಸ್ಥರು ಹಾಗೂ ಕಾರ್ಖಾನೆ ಮಾಲೀಕರು ಇಲಾಖೆಯೊಂದಿಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ. ವಿಶೇಷವಾಗಿ ವಾಣಿಜ್ಯ ಚಟುವಟಿಕೆ ನಡೆಸುವವರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ಮಾನ್ವಿ ಜೆಸ್ಕಾಂ ಕಚೇರಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆ



ಧೈರ್ಯದ ದಾರಿ

**ಮಾನ್ವಿ, ಏಪ್ರಿಲ್ 14:** ಪಟ್ಟಣದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿ, ಕಾರ್ಯ ಮತ್ತು ಪಾಲನೆ ಉಪವಿಭಾಗದಲ್ಲಿ ಅಂಬೇಡ್ಕರ್ ಜಯಂತಿ ಅಂಗವಾಗಿ ಭಾರತರತ್ನ ಸಂವಿಧಾನ ಶಿಲ್ಪಿ ಡಾಕ್ಟರ್ ಬಾಬಾಸಾಹೇಬ ಅಂಬೇಡ್ಕರ್ ಅವರ ಜಯಂತಿಯನ್ನು ಭಕ್ತಿಪೂರ್ವಕವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಚೇರಿಯ ಎಲ್ಲಾ ಅಧಿಕಾರಿ ವರ್ಗದವರು ಹಾಗೂ ಸಿಬ್ಬಂದಿ ವರ್ಗದವರು ಒಂದಾಗಿ ಸೇರಿ ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು. ಅವರ ತತ್ವಗಳು ಮತ್ತು ಸಂವಿಧಾನದ ಮಹತ್ವದ ಕುರಿತು ಅಧಿಕಾರಿಗಳು ಸ್ಮರಣೆ ಮಾಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಧಿಕಾರಿಗಳು, “ಡಾ. ಅಂಬೇಡ್ಕರ್ ಅವರ ಆದರ್ಶಗಳು ನಮ್ಮ ಸಮಾಜಕ್ಕೆ ದಾರಿದೀಪವಾಗಿವೆ. ಅವರ ಸಂವಿಧಾನ ರಚನೆ ದೇಶದ ಅಭಿವೃದ್ಧಿಗೆ ಮೂಲಸ್ತಂಭವಾಗಿದೆ” ಎಂದು ಹೇಳಿದರು.

ಈ ಆಚರಣೆಯಲ್ಲಿ ಜೆಸ್ಕಾಂ ಇಲಾಖೆಯ ವಿವಿಧ ಹುದ್ದೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಅಗ್ನಿಶಾಮಕ ಸೇವಾ ಸಪ್ತಾಹ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ:**ಪಟ್ಟಣದ ಅಗ್ನಿಶಾಮಕ ಠಾಣೆಯಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಅಗ್ನಿಶಾಮಕ ಸೇವಾ ಸಪ್ತಾಹ ಕಾರ್ಯಕ್ರಮ ಅಂಗವಾಗಿ ಅಗ್ನಿ ಶಾಮಕ ಹುತಾತ್ಮರಿಗೆ ಮೌನಾಚರಣೆ ನಡೆಸುವ ಮೂಲಕ ಗೌರವ ಸಲ್ಲಿಸಿ ತಾಲೂಕು ಅಗ್ನಿಶಾಮಕಠಾಣಾಧಿಕಾರಿ ರಂಗಪ್ಪ ಮಾತನಾಡಿ ಮುಂಬೈನ ಬಂದರಿನ ನೌಕೆಯಲ್ಲಿ ನಡೆದ ಅಗ್ನಿ ದುರ್ಘಟನೆಯನ್ನು ತಡೆಯುವ ಸಮಯದಲ್ಲಿ ಸಂಭವಿಸಿದ ಭಾರಿ ಅಪಘಾತದಲ್ಲಿ ನಮ್ಮ 62 ಅಗ್ನಿ ಶಾಮಕವೀರರು ಹುತಾತ್ಮರಾಗಿರುವ ಗೌರವಾರ್ಥ ಪ್ರತಿ ವರ್ಷ ಏ.14 ರಂದು ಅಗ್ನಿಶಾಮಕ ಸೇವಾ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಹಾಯಕ ಅಗ್ನಿಶಾಮಕಠಾಣಾಧಿಕಾರಿ ಹಾಜೀಮಿಯ ಮಾತನಾಡಿ ತಾಲೂಕಿನಲ್ಲಿ ಅಗ್ನಿ ಶಾಮಕ ಇಲಾಖೆಯಿಂದ ಏ.14 ರಿಂದ ಏ.20ರವರೆಗೆ ಅಗ್ನಿಶಾಮಕ ಸೇವಾ ಸಪ್ತಾಹ ಕಾರ್ಯಕ್ರಮವನ್ನು ಆಚರಿಸಲಾಗುವುದು.

ಈ ಆರು ದಿನಗಳಕಾಲ ಸುರಕ್ಷಿತಶಾಲೆ, ಸುರಕ್ಷಿತ ಆಸ್ಪತ್ರೆ, ಅಗ್ನಿ ಸುರಕ್ಷತೆಯ ಕುರಿತು ಜಾಗೃತ ಸಮಾಜ-ಅಗ್ನಿಮುಂಜಾಗ್ರತೆಗಾಗಿ ಒಂದಾಗಿ ಎನ್ನುವ ಘೋಷವಾಕ್ಯದೊಂದಿಗೆ ಶಾಲೆ ಮತ್ತು ಆಸ್ಪತ್ರೆ, ಸೇರಿದಂತೆ ಸಾರ್ವಜನಿಕರಿಗೆ ಅಗ್ನಿ ಸುರಕ್ಷತೆಯ ಬಗ್ಗೆ ಕೈಗೊಳ್ಳಬಹುದಾದ ಮುಂಜಾಗ್ರತೆ ಕ್ರಮ ಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ,ಸಾರ್ವಜನಿಕರಲ್ಲಿ ಅಗ್ನಿ ಸುರಕ್ಷತೆ ಕುರಿತು ಜಾಗೃತಿ ಮೂಡಿಸಲಾಗುವುದು ಎಂದು ತಿಳಿಸಿದರು.

ಅಗ್ನಿಶಾಮಕ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದರು.

## ಡಾ.ಬಿ.ಆರ್.ಅಂಬೇಡ್ಕರ್ ರವರ 135 ನೇ ಜಯಂತಿ ಕಾರ್ಯಕ್ರಮ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ತಹಸೀಲ್ದಾರ್ ಕಚೇರಿಯ .ಆವರಣದಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ ಡಾ.ಬಿ. ಆರ್.ಅಂಬೇಡ್ಕರ್ ರವರ 135 ನೇ ಜಯಂತಿ ಕಾರ್ಯಕ್ರಮವನ್ನು ಶಾಸಕ ಹಂಪಯ್ಯನಾಯಕ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಉದ್ಘಾಟಿಸಿ ಮಾತನಾಡಿ 12 ನೇ ಶತಮಾನದಲ್ಲಿ ಮಹಾತ್ಮ ಬಸವೇಶ್ವರರು ಕಂಡಂತಹ ಜಾತಿ,ವರ್ಗ,ಪಂಥ, ಶೋಷಣೆ ರಹಿತ, ಸಮಸಮಾಜವನ್ನು ಸಂವಿಧಾನದ ಮೂಲಕ ಸಾಕರಗೊಳಿಸಿದವರು. ಡಾ.ಬಿ.ಆರ್. ಅಂಬೇಡ್ಕರ್ ರವರು ಸಮಾಜದಲ್ಲಿನ ಮೇಲು,ಕೀಳು, ಎನ್ನುವ ಭಾವನೆಗಳನ್ನು ತೊಡೆದುಹಾಕಿ ದೇಶದಲ್ಲಿನ ಎಲ್ಲಾ ಸಮುದಾಯಗಳನ್ನು ಒಂದೂಗೂಡಿಸಿಕೊಂಡು ಸಾಗಿದರು. ಸಂವಿಧಾನದಲ್ಲಿ ತಿಳಿಸಿರುವಂತೆ ಜಾತಿ,ಧರ್ಮ,ಪಂಥ,ಭೇದವನ್ನು ಬಿಟ್ಟು ನಾವೆಲ್ಲರೂ ಒಂದೆ ಎನ್ನುವ ಭಾವನೆಯಿಂದ ದೇಶದ ಐಕ್ಯತೆಗಾಗಿ,ಅಭಿವೃದ್ದಿಗಾಗಿ ಬಾಳೋಣ ಎಂದು ಕರೆ ನೀಡಿದರು. ತಾಯಪ್ಪ ಬಿ.ಹೊಸೂರು ಉಪನ್ಯಾಸ ನೀಡಿ ಡಾ.ಬಿ.ಆರ್.ಅಂಬೇಡ್ಕರ್ ರವರು ಸಮಾಜದಲ್ಲಿನ ಎಲ್ಲಾ ವರ್ಗದವರಿಗಾಗಿ ಸಂವಿಧಾನವನ್ನು ರೂಪಿಸಿದರು ಕೂಡ ಡಾ.ಬಿ.ಆರ್.ಅಂಬೇಡ್ಕರ್ ರವರನ್ನು ಕೇವಲ ಒಂದು ಸಮುದಾಯಕ್ಕೆ ಸಿಮೀತವಾಗಿ ನೋಡುವುದನ್ನು ಬಿಟ್ಟು ಅವರನ್ನು ಒಬ್ಬ ಮಹಾನ್ ಮಾನವತವಾದಿಯನ್ನಾಗಿ ನೋಡಬೇಕಾಗಿದೆ. ಅಂಬೇಡ್ಕರ್ ರವರು ದೇಶದಲ್ಲಿನ ಆಸ್ಪ್ರಶತೆ, ಜಾತಿ ಪದ್ದತಿ, ನಿರ್ಮೂಲನೆಗಾಗಿ, ಮಹಿಳೆಯರಿಗೂ ಕೂಡ ಸಮಾನವಾದ ಹಕ್ಕುಗಳನ್ನು ನೀಡುವ ಮೂಲಕ ಎಲ್ಲಾರಿಗೂ ಕೂಡ ಸಮಾನತೆಯ ಹಕ್ಕುಗಳನ್ನು ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಭೀಮರಾಯ ರಾಮಸಮುದ್ರ ಸಂವಿಧಾನ ಪೀಠಿಕೆಯ ಪ್ರತಿಜ್ಞಾವಿಧಿಯನ್ನು ಭೋದಿಸಿದರು.


ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಬಸವ ವೃತ್ತ ಮಾರ್ಗದ ಮೂಲಕ ತಹಸೀಲ್ದಾರ್ ಕಚೇರಿಯ ಆವರಣದವರೆಗೆ ವಿವಿಧ ಜನಪದ ಕಲಾ ತಂಡಗಳೊಂದಿಗೆ ಡಾ.ಬಿ.ಆರ್.ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ ನಡೆಯಿತು. ಸಮಾಜದ ವಿವಿಧ ಕ್ಷೇತ್ರಗಳ ಸಾಧಕರನ್ನು ತಾಲೂಕು ಆಡಳಿತದಿಂದ ಸನ್ಮಾನಿಸಿ ಗೌರವಿಸಲಾಯಿತು.

ಮಾಜಿ ಶಾಸಕ ರಾಜಾ ವೆಂಕಟಪ್ಪನಾಯಕ, ಶಿವರಾಜ ನಾಯಕ, ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ, ತಾಲೂಕು ಪಂಚಾಯತ್ ಇ.ಓ. ಖಾಲಿದ್ ಅಹ್ಮದ್,ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಸಹಾಯಕ ನಿರ್ದೇಶಕರಾದ ಸಾಯಿರಾಬಾನು ನದಾಫ್, ಪಿ.ಐ, ಸೋಮಶೇಖರ ಎಸ್, ಕೆಂಚರೆಡ್ಡಿ, ಕೃಷಿ ಅಧಿಕಾರಿ ಗುರುನಾಥ ಭೋಸನೂರ್, ಪ.ಪಂಗಡ ಕಲ್ಯಾಣಾಧಿಕಾರಿ ಮಹಾಲಿಂಗಪ್ಪ ಇಂಗಳದಾಳ್,ಕನಾರ್ಮಿಕ ನಿರೀಕ್ಷಕರಾದ ಮಲ್ಲಯ್ಯದೊರೆ, ಅಗ್ನಿಶಾಮಕಾಧಿಕಾರಿ ರಂಗಪ್ಪ,ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ. ಬಿ.ಸಿ.ಎಂ. ಇಲಾಖೆ ಅಧಿಕಾರಿ ಭಾಗಯ್ಯನಾಯಕ ಸೇರಿದಂತೆ ಇನ್ನಿತರರು ಇದ್ದರು

## ಲೊಯೋಲ ಕಾಲೇಜಿನಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿ ಆಚರಣೆ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಲೊಯೋಲ ಕಾಲೇಜಿನ ಸಭಾಂಗಣದಲ್ಲಿ ನಡೆದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮ ಅಂಗವಾಗಿ ಡಾ.ಬಿ.ಆರ್ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಿ ಲೊಯೋಲ ಪದವಿ ಕಾಲೇಜಿನ ಪ್ರಾಂಶುಪಾಲ ಫಾ. ವಿನೋದ್ ಪೌಲ್ ಮಾತನಾಡಿ ಡಾ. ಬಿ.ಆರ್ ಅಂಬೇಡ್ಕರ್ ರವರು ಜಾತಿ ಪದ್ಧತಿ ಮತ್ತು ಅಸ್ಪ್ರಶ್ಯತೆಯ ವಿರುದ್ಧ ಹೋರಾಡಿ, ತುಳಿತಕ್ಕೊಳಗಾದ ಸಮುದಾಯಗಳಿಗೆ ಧ್ವನಿಯಾದವರು. ಅವರ ಜ್ಞಾನ ಮತ್ತು ಬದ್ಧತೆ ಸಮಾಜ ಸೇವೆಯಲ್ಲಿ ತೊಡಗಿರುವವರಿಗೆ ಮತ್ತು ವಿದ್ಯಾರ್ಥಿಗಳಿಗೆ ದಾರಿದೀಪವಾಗಿದೆ. ವ್ಯಕ್ತಿತ್ವ ವಿಕಸನ, ವೈಜ್ಞಾನಿಕ ಮನೋಭಾವ ಮತ್ತು ಮೌಢ್ಯಮುಕ್ತ ಸಮಾಜ ನಿರ್ಮಾಣ ಮಾಡುವುದು ಡಾ.ಬಿ.ಆರ್ ಅಂಬೇಡ್ಕರ್ ಅವರ ಕನಸಾಗಿತ್ತು ಎಂದು ತಿಳಿಸಿದರು.



ಲೊಯೋಲ ಕಾಲೇಜಿನ ಉಪಪ್ರಾಂಶುಪಾಲರಾದ ಖಾಸಿಂಸಾಬ್ ಮಾತನಾಡಿದರು.

ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ವಿಠ್ಠಲ್‌ಗಾವಡೆ, ವಿಜ್ಞಾನ ವಿಭಾಗದ ಮುಖ್ಯಸ್ಥರಾದ ಜಾಕಿರ್‌ಪಾಶ, ಭಾಗ್ಯ ಪ್ರಸನ್ನ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.

ಮೊದಲನೇ ಪುಟದಿಂದ

## ಡಾ.ಬಿ.ಆರ್.ಅಂಬೇಡ್ಕರ್ ಅವರ ಆದರ್ಶಗಳನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕು: ಶಾಸಕ ಡಾ.ಶಿವರಾಜ ಪಾಟೀಲ್

ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ, ಹೋರಾಟ, ಸಾಧನೆ ಕುರಿತು ಅವರ ಛಾಯಾಚಿತ್ರ ಪ್ರದರ್ಶನ ಏರ್ಪಡಿಸಲಾಗಿತ್ತು. ಛಾಯಾಚಿತ್ರಗಳನ್ನು ಜಿಲ್ಲಾಧಿಕಾರಿಗಳು, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ವಿವಿಧ ಗಣ್ಯರು, ಸಾರ್ವಜನಿಕರು ವೀಕ್ಷಣೆ ಮಾಡಿದರು.

ಇದೇ ಸಂದರ್ಭದಲ್ಲಿ ಬೀದರ್ ಬುದ್ಧ ವಿಹಾರನ ಬಂಂತೇಜಿ ಯಾಕತ್ಪೂರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್, ಆದಿಜಾಂಭವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

# ವಿಧಾನಸೌಧದಲ್ಲಿ ಕುಳಿತರೆ ಜನರ ಸಮಸ್ಯೆ ಬಗೆಹರಿಯಲ್ಲ : ಹೆಚ್ಡಿಕೆ



**ಬೆಂಗಳೂರು,ಏ.14–** ವಿಧಾನಸೌಧದ ಮೂರನೇ ಮಹಡಿಯಲ್ಲಿ ಕುಳಿತು ಆಡಳಿತ ನಡೆಸಿದರೆ ರಾಜ್ಯದ ಜನರ ಸಮಸ್ಯೆ ಬಗೆಹರಿಯುವುದಿಲ್ಲ ಎಂದು ಕೇಂದ್ರದ ಭಾರೀ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಜೆ.ಪಿ.ಭವನದಲ್ಲಿಂದು ಜೆಡಿಎಸ್ ಹಮಿಕೊಂಡಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಹಾಗೂ ಉಪಪ್ರಧಾನಿ ಡಾ.ಬಾಬು ಜಗಜೀವನರಾಂ ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಳ್ಳಿಹಳ್ಳಿಗೆ ಭೇಟಿ ನೀಡಿ ಜನರ ಸಮಸ್ಯೆಯನ್ನು ಅರಿತು ಆ ಸಮಸ್ಯೆಗಳನ್ನು ಬಗೆಹರಿಸಿದರೆ ಅಂಬೇಡ್ಕರ್‌ರವರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.

ಹಳ್ಳಿಹಳ್ಳಿಗೆ ಭೇಟಿ ನೀಡಿದಾಗ ಯಾವ ಸಮಸ್ಯೆಗಳಿವೆ ಎಂಬುದು ಅರಿವಿಗೆ ಬರಲಿದೆ ಎಂದ ಅವರು, ಜಿಡಿಪಿ ಆಧಾರದ ಮೇಲೆ ರಾಜ್ಯ ಮತ್ತು ರಾಷ್ಟ್ರದ ಅಭಿವೃದ್ಧಿ ಪ್ರಮಾಣ ಪತ್ರ ಕೊಡಲಾಗುವುದಿಲ್ಲ ವಾಸ್ತವಾಂಶಗಳನ್ನು ಹೇಳಿದರೆ ವಿಲನ್‌ಗಳಾಗುತ್ತೆ?ವೆ ಎಂದು ಹೇಳಿದರು.

ಇಂದು ಬೆಳಿಗ್ಗೆ ತುರುವೇಕೆರೆ ತಾಲ್ಲೂಕಿನ ಮಾಯಸಂದ್ರದ ಮಹಿಳೆಯೊಬ್ಬರು ಬಂದು ಮನೆ ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದರು. ಆಕೆಗೆ ನಿವೇಶನವೂ ಇಲ್ಲ, ಗೊರಗುಂಟೆಪಾಳ್ಯದ ಮತ್ತೊಬ್ಬ ಹೆಣ್ಣುಮಗಳು ತನ್ನ ಪತಿಗಾಗಿ ಆಸ್ಪತ್ರೆ ವೆಚ್ಚ 29 ಲಕ್ಷ ಖರ್ಚು ಮಾಡಿದ್ದಾರೆ. ಆದರೆ ಇನ್ನೂ ಗುಣವಾಗಿಲ್ಲ.

ಇಂತಹ ಸಮಸ್ಯೆಗಳನ್ನು ಹೊತ್ತು ನನ್ನ ಬಳಿ ಬರುತ್ತಾರೆ. ಅಂತವರಿಗೆ ಕೈಲಾದ ಸಹಾಯ ಮಾಡುತ್ತಿದ್ದೇನೆ. ಅಂಬೇಡ್ಕರ್‌ರವರ ಕನಸು ನನಸಾಗಲು ಸಂಕಷ್ಟದಲ್ಲಿರುವ ಸಮಸ್ಯೆಯ ಸುಳಿಯಲ್ಲಿರುವ ಇಂತವರಿಗೆ ಪರಿಹಾರ ಒದಗಿಸಿದರೆ ಸಾರ್ಥಕವಾಗುತ್ತದೆ. ಶೋಷಿತರ ಬದುಕನ್ನು ಹಸನುಗೊಳಿಸಿ ಸಮಾನತೆ ತಂದಾಗ ಅಂಬೇಡ್ಕರ್‌ರವರ ಆಶಯ ಈಡೇರಿಸಿದಂತಾಗುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿನ್ನೆ ಸೇತುವೆಯನ್ನು ಉದ್ಘಾಟನೆ ಮಾಡಿದ್ದಾರೆ. ಆ ಸೇತುವೆಗೆ ಸಿದ್ದರಾಮಯ್ಯನವರ ಹೆಸರನ್ನೆ? ಇಟ್ಟಿದ್ದಾರೆ. ಅದು 2014ರಲ್ಲಿ ಮಂಜೂರಾಗಿದ್ದ ಸೇತುವೆ. ಕಳೆದ ಮೂರು ವರ್ಷಗಳಲ್ಲಿ ಆದ ಅಭಿವೃದ್ಧಿ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತಿರುಗೇಟು ನೀಡಿದರು.

ಮುಖ್ಯಮಂತ್ರಿಗಳು ಅಭಿವೃದ್ಧಿ ವಿಚಾರದಲ್ಲಿ ಆತಾವಲೋಕನ ಮಾಡಿಕೊಳ್ಳಬೇಕು. ಅಂಬೇಡ್ಕರ್‌ರವರು ಸಂವಿಧಾನದಲ್ಲಿ ಪ್ರಜೆಗಳ ಹಕ್ಕೆನೆಂಬುದನ್ನು ಪ್ರತಿಪಾದಿಸಿದ್ದಾರೆ. ರಾಜ್ಯಕ್ಕೆ ಉತ್ತಮ ಆಡಳಿತ ನೀಡುವ ಒಳ್ಳೆಯ ನಾಯಕತ್ವದ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದರು.

ಮೂರನೇ ಬಾರಿ ಸಿಎಂ ಆಗುವುದು ಜನರ ಕೈಯಲ್ಲಿದೆ : ನಾನು ಈಗಾಗಲೇ ಎರಡು ಬಾರಿ ಮುಖ್ಯಮಂತ್ರಿಯಾಗಿದ್ದೇನೆ. ಮತ್ತೆ ಮೂರನೇ ಬಾರಿ ಮುಖ್ಯಮಂತ್ರಿಯಾಗುವುದು ನನ್ನ ಕೈಲಿಲ್ಲ. ನಾಡಿನ ಜನರ ಕೈಯಲ್ಲಿದೆ ಎಂದರು. ಬೆಂಗಳೂರು ಸೇರಿದಂತೆ ರಾಜ್ಯಕ್ಕೆ ಒಳ್ಳೆಯದಾಗಬೇಕಿದ್ದರೆ ಜೆಡಿಎಸ್ ಅನಿವಾರ್ಯ. ಇತ್ತಿ?ಚೆಗೆ ನಡೆದ ಬೆಂಗಳೂರಿನ ಜನತಾ ಸಮಾವೇಶ ಹೊಸ ದಾಖಲೆ ನಿರ್ಮಿಸಿದೆ ಎಂದು ಅವರು ಹೇಳಿದರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಹೋರಾಟದ ಫಲವಾಗಿ ಶಾಸನ ಸಭೆಗಳಲ್ಲಿ ಶೇ.33 ರಷ್ಟು ಮಹಿಳಾ ಮೀಸಲಾತಿ ಜಾರಿಯಾಗಲಿದೆ. 2029ಕ್ಕೆ ರಾಜ್ಯದಲ್ಲಿ 116 ಕ್ಷೇತ್ರಗಳು ಮಹಿಳಾ ಮೀಸಲು ಕೇತ್ರಗಳಾಗಿವೆ. ರಾಜ್ಯದಲ್ಲಿ 42 ಲೋಕಸಭಾ ಕ್ಷೇತ್ರಗಳು ಏರಲಿವೆ. ಹೀಗಾಗಿ ಮಹಿಳೆಯರು ನಮ ಪಕ್ಷದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸನ್ನದ್ಧರಾಗಿ ನಾಯಕತ್ವ ಗುಣ ರೂಢಿಸಿಕೊಳ್ಳಬೇಕು ಎಂದರು.

ಏ.20ರ ನಂತರ ವಾರದಲ್ಲಿ ಒಂದು ದಿನ ರಾಜ್ಯದಲ್ಲಿದ್ದು ಪಕ್ಷ ಸಂಘಟನೆಗೆ ಆದ್ಯತೆ ನೀಡಲಾಗುವುದು ಎಂದರು.ಜೆಡಿಎಸ್ ಪರಿಶಿಷ್ಟ ವಿಭಾಗದ ರಾಜ್ಯಾಧ್ಯಕ್ಷ ಡಾ.ಅನ್ನದಾನಿ ಮಾತನಾಡಿ, ಅಂಬೇಡ್ಕರ್‌ರವರ ಕನಸು ನನಸು ಮಾಡಿದ ಮುಖ್ಯಮಂತ್ರಿ ಕುಮಾರಸ್ವಾಮಿಯವರು. ದಲಿತರ ಮನೆಯಲ್ಲಿ ವಾಸ್ತವ್ಯ ಮಾಡಿ ಅವರ ಸಮಸ್ಯೆಯನ್ನು ಅರಿತರು. ಅದರ ಪರಿಣಾಮ ಇಂದು ದಲಿತರ ಕೇರಿಗಳಲ್ಲಿ ಕಾಂಕ್ರಿಟ್ ರಸ್ತೆಗಳು ನಿರ್ಮಾಣವಾಗಿವೆ. ಮತ್ತೆ ಕುಮಾರಸ್ವಾಮಿಯವರು ವಿಧಾನಸೌಧದಲ್ಲಿ ಆಡಳಿತ ನಡೆಸಬೇಕು. ಅದಕ್ಕಾಗಿ ಎಲ್ಲರೂ ಶಕ್ತಿಮೀರಿ ಶ್ರಮಿಸೋಣ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಕೋರ್‌ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ಮಾಜಿ ಸಚಿವ ವೆಂಕಟರಾವ್ ನಾಡಗೌಡ, ವಿಧಾನಪರಿಷತ್ ಸದಸ್ಯರಾದ ಜವರಾಯಿಗೌಡ, ಟಿ.ಎ.ಶರವಣ, ವಿಧಾನಪರಿಷತ್ ಮಾಜಿ ಸದಸ್ಯರಾದ ರಮೇಶ್‌ಗೌಡ, ತಿಪ್ಪೆಸ್ವಾಮಿ ಮತ್ತಿತರ ಮುಖಂಡರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಜಯಂತಿಯಲ್ಲಿ ಪ್ಲಾಸ್ಟಿಕ್ ಹೂ ಬಳಕೆಗೆ ಖಂಡನೆ



**ಬಳ್ಳಾರಿ,ಏ.14:** ನಗರದ ಅಂಬೇಡ್ಕರ್ ಭವನದಲ್ಲಿ ಸಂವಿಧಾನದ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಈ ವೇಳೆ ಹೋರಾಟಗಾರ ಕಟ್ಟೆ ಸ್ವಾಮಿ ಅವರು ಆಗಮಿಸಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಿ. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ವಿರುದ್ಧ ತೀವ್ರ ಬೇಸರ ವ್ಯಕ್ತಪಡಿಸಿ ಆಕ್ರೋಶ ಹೊರಹಾಕಿದರು. ಮಹಾನಗರ ಪಾಲಿಕೆಯ ಪ್ಲಾಸ್ಟಿಕ್ ಬಳಕೆ ನಿಷೇಧ ಇದ್ದರೂ ಕೂಡ ಅಂಬೇಡ್ಕರ್ ಅವರ ಪುತ್ಥಳಿಯ ಸುತ್ತ ಹೂವಿನ ಅಲಂಕಾರ ಬದಲು ಪ್ಲಾಸ್ಟಿಕ್ ಹೂಗಳನ್ನು ಬಳಸಿರುವುದನ್ನು ಅವರು ಖಂಡಿಸಿದರು.

ಇಡೀ ದೇಶಕ್ಕೆ ಮಾದರಿಯಾದ ಮಹಾನ್ ವ್ಯಕ್ತಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿಯಂತಹ ಮಹತ್ವದ ದಿನದಲ್ಲಿ ಈ ರೀತಿಯ ನಿರ್ಲಕ್ಷ್ಯ ತೋರಿರುವುದು ವಿಷಾದನೀಯ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಮಹಾನಗರ ಪಾಲಿಕೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಡಳಿತಕ್ಕೆ ಆಕ್ರೋಶಭರಿತ ಮನವಿ ಸಲ್ಲಿಸಿದರು.

# 2028ರಲ್ಲಿ ರಾಜ್ಯದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ : ಆರ್.ಅಶೋಕ್



**ನಾಗಮಂಗಲ,ಏ.14–** ಮುಂಬರುವ 2028ರಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ರಚನೆಯಾಗಲಿದೆ. ಯಾರು ಮುಖ್ಯಮಂತ್ರಿಯಾಗಬೇಕೆಂದು ಪ್ರಧಾನಿ ನರೇಂದ್ರ ಮೋದಿ ತೀರ್ಮಾನಿಸಲಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾ ಡಿದ ಅವರು, 2028ರಲ್ಲಿ ಕರ್ನಾಟಕದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ನೇತೃತ್ವದ ಸರ್ಕಾರ ರಚನೆಯಾಗಲಿದೆ. ಜೆಡಿಎಸ್ ಕೂಡ ಜೊತೆಗೆ ಇರಲಿದೆ. ಯಾರು ಮುಖ್ಯಮಂತ್ರಿಯಾಗಬೇಕು ಎಂದು ಪ್ರಧಾನಿ ನರೇಂದ್ರಮೋದಿ, ಸಚಿವ ಅಮಿತ್ ಶಾ ಮೊದಲಾದ ನಾಯಕರು ತೀರ್ಮಾನಿಸಲಿದ್ದಾರೆ ಎಂದರು.

ಬಿಜೆಪಿಯಲ್ಲಿ ಮುಖ್ಯಮಂತ್ರಿ ಆಕಾಂಕ್ಷಿಗಳು ಅನೇಕರಿದ್ದಾರೆ. ಪಕ್ಷದ ಆಶೀರ್ವಾದವಿದ್ದರೆ ನಾನು ಕೂಡ ಸಿಎಂ ಆಗಬಹುದು. ಈಗ ಅವೆಲ್ಲಕ್ಕಿಂತಲೂ ಸಿದ್ದರಾಮಯ್ಯ ನೇತೃತ್ವದ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವುದು ಮುಖ್ಯ. ಇದಕ್ಕಾಗಿ ನಾವು ಹೋರಾಟ ಮುಂದುವರಿಸುತ್ತೇವೆ ಎಂದರು.ಮುಖ್ಯಮಂತ್ರಿ ಬದಲಾವಣೆ ನವೆಂಬರ್‌ನಲ್ಲಿ ಆಗಬೇಕಿತ್ತು. ಈಗ ಆ ದಿನಾಂಕ ಮುಗಿದುಹೋಗಿದೆ. ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಮಲ್ಲಿಕಾರ್ಜುನ ಖರ್ಗೆಯವರ ಮನೆಗೆ ಹೋಗಿ ಗಲಾಟೆ ಮಾಡಿದ್ದಾರೆ. ಈ ಜಗಳದಲ್ಲೆ ಸರ್ಕಾರ ಸತ್ತುಹೋಗಿದೆ. ಪಕ್ಷದ ಅಧ್ಯಕ್ಷರಿಗೆ ಗೌರವ ಇದ್ದಿದ್ದರೆ ಶಾಸಕರು ದೆಹಲಿಗೆ ಹೋಗುತ್ತಿರಲಿಲ್ಲ.

ಡಿ.ಕೆ.ಶಿವಕುಮಾರ್ ಧ್ವನಿಗೆ ಮೂರು ಪೈಸೆಯ ಬೆಲೆಯನ್ನು ಶಾಸಕರು ನೀಡುತ್ತಿಲ್ಲ. ಅವರ ವರ್ಚಸ್ಸು ಕಡಿಮೆಯಾಗುತ್ತಿದೆ ಎಂಬುದು ಇದರಿಂದ ತಿಳಿದುಬರುತ್ತದೆ ಎಂದು ವ್ಯಂಗ್ಯವಾಡಿದರು. ಕಾಂಗ್ರೆಸ್‌ನಲ್ಲಿ ಸಿಎಂ ಆಸೆ ಇಟ್ಟುಕೊಂಡವರು ಜಗಳವಾಡುತ್ತಿದ್ದಾರೆ. ಈ ನಡುವೆ ರಾಜ್ಯದ ಅಭಿವೃದ್ಧಿ ನಡೆಯುತ್ತಿಲ್ಲ. ಹಿಂದೆ ಜನತಾದಳವನ್ನು ಜಗಳಗಳ ಪಾರ್ಟಿ ಎಂದು ಕರೆಯುತ್ತಿದ್ದರು. ಈಗ ಅದೇ ಕಾಂಗ್ರೆಸ್ಸೆ ಜಗಳಗಳ ಪಾರ್ಟಿಯಾಗಿದೆ ಎಂದು ಟೀಕಿಸಿದರು.

ಮಂದಿರ ಉದ್ಘಾಟನೆ:
ಆದಿಚುಂಚನಗಿರಿ ಸಂಸ್ಥಾನದ ಗುರು ಭೆರವೆಕ್ಯ ಮಂದಿರದ ಉದ್ಘಾಟನೆಗೆ ಪ್ರಧಾನಿ ನರೇಂದ್ರ ಮೋದಿ ಆಗಮಿಸಲಿದ್ದಾರೆ. ಇಲ್ಲಿ ಉತ್ತಮ ತಯಾರಿ ನಡೆಯುತ್ತಿದ್ದು, ಸಾವಿರಾರು ಜನರು ಕೂರುವ ವ್ಯವಸ್ಥೆ ಮಾಡಲಾಗಿದೆ. ಮಂದಿರವನ್ನು ಬಹಳ ಆಕರ್ಷಕ ವಿನ್ಯಾಸದಲ್ಲಿ ನಿರ್ಮಿಸಲಾಗಿದೆ.
ಪ್ರಧಾನಿ ನರೇಂದ್ರಮೋದಿಗೆ ಮಠದ ಬಗ್ಗೆ ಅಪಾರ ಭಕ್ತಿ ಭಾವವಿದೆ.

ಈ ಹಿಂದೆಯೂ ಅವರು ಮಠದ ಅನೇಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಪ್ರಧಾನಿ ನರೇಂದ್ರ ಮೋದಿಯವರು ಮೊದಲಿಗೆ ಭೆರವೆಕ್ಯ ದೇವರ ಪೂಜೆಯಲ್ಲಿ ಪಾಲ್ಗೊಂಡು, ನಂತರ ಮಂದಿರ ಉದ್ಘಾಟನೆ ಹಾಗೂ ಸಾರ್ವಜನಿಕ ಸಭೆಯಲ್ಲಿ ಭಾಗವಹಿಸುತ್ತಾರೆ ಎಂದು ತಿಳಿಸಿದರು.
ನನಗೂ ಕೂಡ ಕಾರ್ಯಕ್ರಮ ದಲ್ಲಿ ಪಾಲ್ಗೊಳ್ಳಲು ಅವಕಾಶ ದೊರೆತಿದ್ದು, ನಾಳಿನ ಕಾರ್ಯಕ್ರಮದಲ್ಲಿ ಭಾಗಿ ಯಾಗುವುದಾಗಿ ಆರ್. ಅಶೋಕ್ ಹೇಳಿದರು.

## ಸಿದ್ದರಾಮಯ್ಯನವರನ್ನು ದುರ್ಬಲಗೊಳಿಸಲು ಕಾಂಗ್ರೆಸ್‌ನಲ್ಲಿ ನಡೆಯುತ್ತಿದೆಯೇ ವ್ಯವಸ್ಥಿತ ಕಾರ್ಯತಂತ್ರ..?



**ಬೆಂಗಳೂರು,ಏ.14–** ಮುಖ್ಯಮಂತ್ರಿ ಯಾಗಿ ಮುಂದುವರಿಯಬೇಕು ಎಂಬ ಜಿದ್ದಿಗೆ ಬಿದ್ದಿರುವ ಸಿದ್ದರಾಮಯ್ಯ ಅವರ ರೆಕ್ಕೆಪುಕ್ಕಗಳನ್ನು ಕತ್ತರಿಸಿ ನಿಶಕ್ತಿಕರಣಗೊಳಿಸುವ ವ್ಯವಸ್ಥಿತ ಕಾರ್ಯತಂತ್ರ ಕಾಂಗ್ರೆಸ್‌ನಲ್ಲಿ ನಡೆಯುತ್ತಿದೆ. ಸಿದ್ದರಾಮಯ್ಯ ಅವರ ಪರವಾಗಿ ಧ್ವನಿ ಎತ್ತಿದ ಬಹುತೇಕ ನಾಯಕರ ವಿರುದ್ಧ ಕಾಂಗ್ರೆಸ್‌ನಲ್ಲಿ ಒಂದಲ್ಲಾ ಒಂದು ಕಾರಣಕ್ಕೆ ಪದಚ್ಯುತಿಗೊಳಿಸುವ ಮೂಲಕ ಇತರರಲ್ಲೂ ಭಯ ಸೃಷ್ಟಿಸುವ ಪ್ರಯತ್ನಗಳಾಗುತ್ತಿವೆ.

ಸಚಿವರಾದ ಸತೀಶ್‌ಜಾರಕಿಹೊಳಿ, ಎಚ್.ಸಿ.ಮಹದೇವಪ್ಪ, ಮಾಜಿ ಸಚಿವ ಕೆ.ಎನ್.ರಾಜಣ್ಣ ಸೇರಿದಂತೆ ಕೆಲವರು ಸಿದ್ದರಾಮಯ್ಯ ಅವರ ಕಟ್ಟಾ ಬೆಂಬಲಿಗರಾಗಿ ಗುರುತಿಸಿಕೊಂಡಿದ್ದರು. ರಾಜಕಾರಣದಲ್ಲಿ ಸಿದ್ದರಾಮಯ್ಯ ಅವರು ಎಂತಹುದೇ ಕಠಿಣ ಸಂದರ್ಭ ಬಂದರೂ ತಮ ಬೆಂಬಲಿಗರನ್ನು ಕೈಬಿಡುವುದಿಲ್ಲ ಎಂಬ ಪ್ರತೀತಿ ಇದೆ. ಆದರೆ ಇದಕ್ಕೆ ಅಪವಾದ ಎಂಬಂತೆಕೆ.ಎನ್. ರಾಜಣ್ಣ ಅವರ ತಲೆದಂಡವಾಗಿತ್ತು.
ಈ ಹಿಂದೆ ಸಿದ್ದರಾಮಯ್ಯ ಅವರ ಬಣದಲ್ಲಿದ್ದ ಕೆಲವು ನಾಯಕರು ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿಗೆ ಪಟ್ಟು ಹಿಡಿದು ಹಾಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪ್ರಾಬಲ್ಯವನ್ನು ತಗ್ಗಿಸುವ ಪ್ರಯತ್ನ ನಡೆಸಿದ್ದರು.

ಈ ಹಿಂದೆ ಲೋಕಸಭಾ ಚುನಾವಣಾ ಸಂದರ್ಭದಲ್ಲಿ ಹೆಚ್ಚುವರಿ ಮುಖ್ಯಮಂತ್ರಿ ಹುದ್ದೆಗಳ ಸೃಷ್ಟಿಯ ಬೇಡಿಕೆ ವ್ಯಾಪಕ ಮುಜುಗರ ಉಂಟು ಮಾಡಿತ್ತು. ಎಷ್ಟು ಬಾರಿ ಸೂಚನೆ ನೀಡಿದ್ದರೂ ಕೂಡ ಸಚಿವರು ತಮ ಬೇಡಿಕೆಗಳನ್ನು ನಿಲ್ಲಿಸಿರಲಿಲ್ಲ. ಸಮಯಕ್ಕಾಗಿ ಕಾಯುತ್ತಿದ್ದ ಡಿ.ಕೆ.ಶಿವಕುಮಾರ್ ಅವರು ಮತಗಳ್ಳತನ ಪ್ರಕರಣದಲ್ಲಿ ಸಚಿವ ಕೆ.ಎನ್. ರಾಜಣ್ಣ ಅವರ ಹೇಳಿಕೆಗಳನ್ನೆ ಅಸ್ತ್ರ ಮಾಡಿಕೊಂಡು ಹೈಕಮಾಂಡ್‌ಗೆ ವರದಿ ನೀಡಿದ್ದರು. ಪರಿಣಾಮ ವಿಧಾನಮಂಡಲದ ಅಧಿವೇಶನ ನಡೆಯುತ್ತಿದ್ದ ಸಂದರ್ಭದಲ್ಲೆ ಮುಲಾಜಿಲ್ಲದೇ ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಸಂದೇಶ ರವಾನೆಯಾಗಿತ್ತು.
ಕೊನೇ ಕ್ಷಣದವರೆಗೂ ರಾಜಣ್ಣ ಅವರನ್ನು ಉಳಿಸಿಕೊಳ್ಳಲು ಸಿದ್ದರಾಮಯ್ಯ ಹರಸಾಹಸ ನಡೆಸಿದ್ದರು. ಆದರೆ ಹೈಕಮಾಂಡ್ ಯಾವುದೇ ಸಹನೆ ತೋರಿಸದೇ ತನ್ನ ನಿಲುವಿಗೆ ಅಂಟಿಕೊಂಡಿತ್ತು. ವರಿಷ್ಠರ ಹಠದ ಮುಂದೆ ಸಿದ್ದರಾಮಯ್ಯ ಅವರ ಆಟ ನಡೆಯಲಿಲ್ಲ. ಕೊನೆಗೆ ರಾಜಣ್ಣ ಅವರನ್ನು ಸಂಪುಟದಿಂದಲೇ ವಜಾಗೊಳಿಸಲಾಯಿತು.

ಅಂತಿಮ ಕ್ಷಣದಲ್ಲಿ ಸಿದ್ದರಾಮಯ್ಯ ಅವರು, ಕನಿಷ್ಠ ರಾಜಣ್ಣ ಅವರಿಗೆ ಸ್ವಯಂ ರಾಜೀನಾಮೆ ನೀಡಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದ್ದರು. ಆದರೆ ಹೈಕಮಾಂಡ್ ಯಾವುದನ್ನೂ ಪರಿಗಣಿಸದೆ ರಾಜೀನಾಮೆ ಪಡೆಯುವ ಬದಲಾಗಿ ವಜಾಗೊಳಿಸುವ ನಿರ್ಣಯ ಕೈಗೊಳ್ಳುವಂತೆ ಒತ್ತಡ ಹಾಕಿತ್ತು.

ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ತಮ ಬೆಂಬಲಿಗರನ್ನು ಉಳಿಸಿಕೊಳ್ಳಲಾಗದೇ ಅಸಹಾಯಕರಾಗಿದ್ದರು. ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ಕೆ.ಗೋವಿಂದರಾಜ್ ಅವರನ್ನು ಕೈಬಿಡುವ ಸಂದರ್ಭದಲ್ಲೂ ಇದೇ ಕಾರ್ಯತಂತ್ರವನ್ನು ಅನುಸರಿಸಲಾಗಿತ್ತು. ಈಗ ನಜೀರ್ ಅಹಮದ್ ಅವರ ಉಚ್ಚಾಟನೆಯ ಮೂಲಕ 3ನೇ ಬಾರಿಗೆ ಸಿದ್ದರಾಮಯ್ಯ ಅವರಿಗೆ ಹಿನ್ನಡೆಯಾದಂತಿದೆ. ರಾಜಕಾರಣ ಅವಕಾಶಗಳ ಕಲೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪದೇ ಪದೇ ಹೇಳುತ್ತಿರುತ್ತಾರೆ. ಇತ್ತಿ?ಚಿನ ದಿನಗಳಲ್ಲಿ ಪ್ರತಿಯೊಂದು ಅವಕಾಶವನ್ನು ತಮ ಅನುಕೂಲಕ್ಕೆ ಬಳಸಿಕೊಳ್ಳುವ ಮೂಲಕ ಡಿ.ಕೆ.ಶಿವಕುಮಾರ್ ರಾಜಕೀಯವಾಗಿ ಮೇಲುಗೈ ಸಾಧಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾಗಿ ತಮಗಿರುವ ಅವಕಾಶಗಳನ್ನು ಸಮರ್ಥವಾಗಿ ಬಳಸಿಕೊಳ್ಳುತ್ತಿದ್ದು, ಸಿದ್ದರಾಮಯ್ಯ ಅವರೇ ಗೌರವಯುತವಾಗಿ ಮುಖ್ಯಮಂತ್ರಿ ಸ್ಥಾನದಿಂದ ನಿರ್ಗಮಿಸುವಂತಹ ವಾತಾವರಣವನ್ನು ನಿರ್ಮಿಸಲಾಗುತ್ತಿದೆ. ಎರಡನೇ ಬಾರಿ ಮುಖ್ಯಮಂತ್ರಿಯಾಗಿ 3 ವರ್ಷ ಅಧಿಕಾರ ಪೂರ್ಣಗೊಳಿಸುವ ಹೊಸ್ತಿಲಿನಲ್ಲಿರುವ ಸಿದ್ದರಾಮಯ್ಯ ಅವರಿಗೆ ದಿನೇದಿನೇ ರಾಜಕೀಯ ಪರಿಸ್ಥಿತಿ ಹದಗೆಡುವಂತಾಗಿದೆ. ಬೆಂಬಲಿಗರನ್ನು ಬಲಿಕೊಟ್ಟು ಅಧಿಕಾರದಲ್ಲಿ ಮುಂದುವರಿಯಬೇಕೇ? ಎಂಬ ಜಿಜ್ಞಾಸೆ ಕಾಡುವಂತಾಗಿದೆ.ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಫಲಿತಾಂಶ ಪ್ರಕಟಗೊಳ್ಳುವ ಮುನ್ನವೇ ಈಗಾಗಲೇ ಎರಡು ತಲೆದಂಡಗಳಾಗಿವೆ. ಇನ್ನೂ ಪ್ರಮುಖ ನಾಯಕರ ತಲೆದಂಡದ ಮುನ್ಸೂಚನೆ ಇದೆ. ಫಲಿತಾಂಶ ಬಳಿಕ ಸಚಿವ ಜಮೀರ್ ಅಹಮದ್ ಖಾನ್ ರಾಜೀನಾಮೆ ನೀಡಬೇಕೆಂದು ಸೂಚಿಸಿರುವುದಾಗಿ ಮೂಲಗಳು ತಿಳಿಸಿವೆ.
ಒಂದು ವೇಳೆ ಅದು ಘಟಿಸಿದ್ದೇ ಆದರೆ ಸಿದ್ದರಾಮಯ್ಯ ನಿಸ್ಸಹಾಯಕರು ಎಂಬ ಸಂದೇಶ ರವಾನೆಯಾಗಲಿದ್ದು, ಅಂತಹ ಸಂದರ್ಭದಲ್ಲಿ ಮುಖ್ಯಮಂತ್ರಿಯವರು ತಮ ಸ್ವಾಭಿಮಾನವನ್ನು ಬದಿಗಿಟ್ಟು ಕುರ್ಚಿ ಉಳಿಸಿಕೊಳ್ಳುತ್ತಾರೆಯೇ ಎಂಬ ಪ್ರಶ್ನೆ ಕಾಡಲಾರಂಭಿಸಿದೆ.

## ಸಾತಿಹಾಳ ಬಳಿ ಬಸ್ ಪಲ್ಟಿ : 20 ಪ್ರಯಾಣಿಕರಿಗೆ ಗಾಯ




**ವಿಜಯಪುರ, ಏ. 14:**ಚಾಲಕನ ನಿಯಂತ್ರಣ ತಪ್ಪಿ ಸರ್ಕಾರಿ ಬಸ್ ಪಲ್ಟಿಯಾದ ಘಟನೆ
ದೇವರಹಿಪ್ಪರಗಿ ತಾಲೂಕಿನ ಸಾತಿಹಾಳ ಗ್ರಾಮದ ಬಳಿ ನಡೆದಿದೆ.
ಏಂ 28– ಈ1958 ನಂಬರಿನ ಸರ್ಕಾರಿ ಬಸ್ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿ ಜಮೀನಿನಲ್ಲಿ ಪಲ್ಟಿಯಾಗಿ ಬಿದ್ದಿದೆ.
ಬಸ್ ನಲ್ಲಿದ್ದ 20 ಪ್ರಯಾಣಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಗಾಯಾಳುಗಳಿಗೆ ಸ್ಥಳಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗಿದೆ.
ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲು ದೇವರಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ್ ಸಹೋದರ ಸಚಿನಗೌಡ ಸಹಾಯ ನೀಡಿದರು.
ದೇವರಹಿಪ್ಪರಗಿ ಪೊಲೀಸ್ ಠಾಣೆಯ ವ್ಯಾಪ್ತಿ ಪ್ರಕರಣ ದಾಖಲಾಗಿದೆ.

# ಡಿ.ಎಸ್.ಎಸ್ ಸಾಗರ ಬಣದಿಂದ ಅಂಬೇಡ್ಕರ್ ಜಯಂತಿ



**ಬಳ್ಳಾರಿ, ಏ.14:** ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಡಾ. ಡಿಜಿ ಸಾಗರ ಬಣ)ಯಿಂದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135 ನೇ ಜಯಂತೋತ್ಸವವನ್ನು ಇಂದು ಅಂಬೇಡ್ಕರ್ ಭವನದಲ್ಲಿರುವ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮುಖಾಂತರ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ. ಎ.ಮಾನಯ್ಯ ರಾಜ್ಯ ಸಂಘಟನಾ ಸಂಚಾಲಕರು. ಸಿ. ನರಸಪ್ಪ. ಚಲುವಾದಿ ಮಹಾಸಭಾ ರಾಜ್ಯ ಉಪಾಧ್ಯಕ್ಷರು. ಮಲ್ಲಯ್ಯ ಕೊಳಗಲ್ಲು. ಜಿಲ್ಲಾ ಸಂಘಟನಾ ಸಂಚಾಲಕರು. ಹೆಚ್. ಆಂಜನೇಯ ಎಂ. ಗೋನಾಳ್. ಜಿಲ್ಲಾ ಸಂಘಟನಾ ಸಂಚಾಲಕರು. ಮುಖಂಡರುಗಳಾದ ಟಿ.ಎಂ. ಎರ್ರಿಸ್ವಾಮಿ. ಬಿ..ರಮೇಶ. ಹೆಚ್. ಶಂಕರ ಬಾಪೂಜಿನಗರ.ಹೆಚ್. ಮಲ್ಲಪ್ಪ. ಸಿದ್ಧಾರ್ಥ (ಸೋನು)ಹನುಮಂತ ಬೂದಿಹಾಳ್. ದುರ್ಗಾದಾಸ್. ಎರ್ರಿಸ್ವಾಮಿ ಜೋಳದರಾಶಿ. ಗಂಗಾಧರ ಚೆಳ್ಳಗುರ್ಕಿ. ತಿರುಮಲ ಎರಗುಡಿ. ಹನುಮಂತ ಯಾಲ್ಪಿ. ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಯರಗೋಳದಲ್ಲಿ ತೀವ್ರ ನೀರಿನ ಬಿಕ್ಕಟ್ಟು



**ಯಾದಗಿರಿ:ಏ.14:** ಜಿಲ್ಲೆಯ ಯರಗೋಳ ಗ್ರಾಮದಲ್ಲಿ ಕುಡಿವ ನೀರಿನ ಕೊರತೆ ಗಂಭೀರ ಸಂಕಷ್ಟವಾಗಿ ಪರಿಣಮಿಸಿದ್ದು, ಗ್ರಾಮಸ್ಥರ ದಿನನಿತ್ಯದ ಬದುಕು ಕಷ್ಟಕರವಾಗುತ್ತಿದೆ. ಉಷ್ಣತೆಯ ತೀವ್ರತೆ ಏರಿಕೆಯಾಗುತ್ತಿದ್ದಂತೆ ನೀರಿನ ಮೂಲಗಳು ಬರಿದು ಹೋಗಿದ್ದು, ಗ್ರಾಮದಲ್ಲಿ ನೀರಿನ ಲಭ್ಯತೆ ಬಹುತೇಕ ಕುಂಠಿತಗೊಂಡಿದೆ.

ಗ್ರಾಮದ ಅನೇಕ ಬೋರ್ವೆಲ್‌ಗಳು ಒಣಗಿ ಹೋಗಿರುವುದರಿಂದ ಜನರು ಕುಡಿಯುವ ನೀರಿಗಾಗಿ ದೂರದ ಪ್ರದೇಶಗಳಿಗೆ ತೆರಳಿ ತರುವ ಪರಿಸ್ಥಿತಿ ಎದುರಾಗಿದೆ. ಕೆಲ ಕುಟುಂಬಗಳು ಪ್ರತಿದಿನವೂ ಹಲವಾರು ಕಿಲೋಮೀಟರ್‌ಗಳಷ್ಟು ದೂರ ಪ್ರಯಾಣಿಸಿ ನೀರು ಸಂಗ್ರಹಿಸಬೇಕಾದ ಅನಿವಾರ್ಯತೆ ಉಂಟಾಗಿದೆ. ನೀರಿನ ಕೊರತೆಯಿಂದ ಮನೆಮಂದಿಯ ದಿನಚರಿ ಅಸ್ತವ್ಯಸ್ತಗೊಂಡಿದ್ದು, ವಿಶೇಷವಾಗಿ ಮಹಿಳೆಯರು ಹಾಗೂ ಹಿರಿಯ ನಾಗರಿಕರು ಹೆಚ್ಚಿನ ಸಂಕಷ್ಟ ಅನುಭವಿಸುತ್ತಿದ್ದಾರೆ.

ಗ್ರಾಮದಲ್ಲಿ ಸ್ಥಾಪಿಸಲಾಗಿದ್ದ ಕುಡಿಯುವ ನೀರಿನ ಶುದ್ಧೀಕರಣ ಘಟಕಗಳು ನಿರ್ವಹಣೆಯ ಕೊರತೆಯಿಂದ ಕಾರ್ಯನಿರ್ವಹಿಸದೇ ಬಿದ್ದಿದ್ದು, ಸಾರ್ವಜನಿಕರಿಗೆ ಯಾವುದೇ ಪ್ರಯೋಜನ ನೀಡುತ್ತಿಲ್ಲ. ಇದರಿಂದಾಗಿ ಜನರು ಶುದ್ಧ ನೀರಿನ ಕೊರತೆಯನ್ನು ಎದುರಿಸುತ್ತಿದ್ದು, ಆರೋಗ್ಯ ಸಮಸ್ಯೆಗಳ ಭೀತಿ ಕೂಡ ಹೆಚ್ಚಾಗಿದೆ.

ಸ್ಥಳೀಯವಾಗಿ ಸಮಸ್ಯೆ ಪರಿಹಾರಕ್ಕೆ ತಕ್ಷಣದ ಕ್ರಮಗಳು ಕೈಗೊಳ್ಳದಿರುವುದು ಜನರಲ್ಲಿ ಅಸಮಾಧಾನವನ್ನು ಉಂಟುಮಾಡಿದೆ. ನೀರಿನ ಪೂರೈಕೆ ವ್ಯವಸ್ಥೆ ಸುಧಾರಣೆ, ಹಳೆಯ ಬೋರ್‌ವೆಲ್‌ಗಳ ದುರಸ್ತಿ ಮತ್ತು ಹೊಸ ನೀರಿನ ಮೂಲಗಳ ಅನ್ವೇಷಣೆ ಅಗತ್ಯವಿದೆ ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಗ್ರಾಮ ಪಂಚಾಯತ್ ಹಾಗೂ ಸಂಬಂಧಿತ ಇಲಾಖೆ ತುರ್ತು ಕ್ರಮ ಕೈಗೊಂಡು ಟ್ಯಾಂಕರ್‌ಗಳ ಮೂಲಕ ನಿಯಮಿತ ನೀರು ಪೂರೈಕೆ ಮಾಡಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ಇಲ್ಲವಾದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸಾಬಣ್ಣ ಎಸ್. ಹಿರಿಬಾನರ್, ನಾಗೇಂದ್ರ ಗಮಗಾ, ಬಸವರಾಜ್ ಗುಡಿ, ನಿಂಗಣ್ಣ ಕೆಲ್ಲೂರು, ಭೀಮಣ್ಣ ಕಕ್ಕೇರಿ, ಲಕ್ಷ್ಮಿ ಬಿಮ್ನಳ್ಳಿ, ಸುಲೋಚನಾ, ದೇವಿದ್ರಮ್ಮ, ಪಾರ್ವತಿ, ಶಿವಕಾಂತಮ್ಮ, ಶಶಿಕಲಾ, ರೇಖಾ ಸೇರಿದಂತೆ ಅನೇಕರು ಉಪಸ್ಥಿತರಿದ್ದು, ನೀರಿನ ಸಮಸ್ಯೆಗೆ ಶೀಘ್ರ ಶಾಶ್ವತ ಪರಿಹಾರ ಒದಗಿಸಬೇಕೆಂದು ಒತ್ತಾಯಿಸಿದರು.

# ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ಅಂಬೇಡ್ಕರ್ ಜಯಂತಿ: ಸಮಾನತೆಯ ಸಂದೇಶ ಸಾರಿದ ಮಹೋತ್ಸವ




**ಯಾದಗಿರಿ: ಏ.14:**ಸಮಾಜ ಪರಿವರ್ತನೆಯ ಮಹಾಮಂತ್ರದೊಂದಿಗೆ ದೇಶದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ನಗರ ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ವೈಚಾರಿಕ ಪ್ರೇರಣೆಯ ಸಂಭ್ರಮವಾಗಿ ಆಚರಿಸಲಾಯಿತು. ಈ ಕಾರ್ಯಕ್ರಮವು ಕೇವಲ ಸ್ಮರಣೋತ್ಸವವಾಗಿರದೆ, ಸಮಾನತೆ, ನ್ಯಾಯ ಮತ್ತು ಮಾನವೀಯ ಮೌಲ್ಯಗಳ ಪುನರುಜ್ಜೀವನದ ಸಂಕೇತವಾಗಿ ಮೂಡಿಬಂದಿತು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ನಗರಸಭೆ ಹಾಗೂ ಭಾರತಾಂಬೆ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಅವರ ಚಿಂತನೆಗಳ ಮಹತ್ವವನ್ನು ಹೃದಯಂಗಮವಾಗಿ ಸ್ಮರಿಸಲಾಯಿತು.

ಭಾರತಾಂಬೆ ಸಂಸ್ಥೆಯ ಮುಖ್ಯಸ್ಥ ಭೀಮಾಶಂಕರ ದೊಡ್ಮನಿ ಅವರು ತಮ್ಮ ಉಜ್ವಲ ಭಾಷಣದಲ್ಲಿ, "ಅಂಬೇಡ್ಕರ್ ಎಂಬುದು ಕೇವಲ ವ್ಯಕ್ತಿತ್ವವಲ್ಲ, ಅದು ಅನಂತ ಜ್ಞಾನಸಂಪತ್ತಿನ ಮಹಾಸಾಗರ. ಅವರ ಚಿಂತನೆಗಳು ಶೋಷಿತ ಸಮುದಾಯಗಳಿಗೆ ಬೆಳಕಿನ ದೀಪವಾಗಿದ್ದು, ಸಮಾನತೆಯ ಹೊಸ ಯುಗಕ್ಕೆ ದಾರಿ ತೋರಿಸಿದವು" ಎಂದು ಹೇಳಿದರು.
ಅವರ ಬರಹಗಳು ಮಾನವ ಮೌಲ್ಯಗಳ ಸಂಕಲನವಾಗಿದ್ದು, ಅವುಗಳನ್ನು ಅರಿತುಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಅವರು ಒತ್ತಿ ಹೇಳಿದರು.

ನಿರಾಶ್ರಿತರ ಕೇಂದ್ರದ ವ್ಯವಸ್ಥಾಪಕ ಬೀರಲಿಂಗಪ್ಪ ಕಿಲ್ಲನಕೇರಾ ಅವರು ಮಾತನಾಡಿ, "ಅಂಬೇಡ್ಕರ್ ಅವರ ತತ್ವಗಳನ್ನು ಮರೆಯುವ ಸಮಾಜ ತನ್ನ ಆತ್ಮವನ್ನೇ ಕಳೆದುಕೊಳ್ಳುತ್ತದೆ. ಜಯಂತಿ ಆಚರಣೆಗಳ ಮೂಲ ಉದ್ದೇಶ ಯುವಜನತೆಗೆ ಅವರ ಚಿಂತನೆಗಳ ಸ್ಫೂರ್ತಿಯನ್ನು ಹಂಚುವುದು" ಎಂದು ತಿಳಿಸಿದರು.
ಸಮಾಜದಲ್ಲಿ ಜಾತಿ, ಲಿಂಗ ಮತ್ತು ವರ್ಗ ಬೇಧಗಳನ್ನು ನಿರ್ಮೂಲಗೊಳಿಸಲು ಕಾನೂನುಗಳಷ್ಟೇ ಸಾಕಾಗುವುದಿಲ್ಲ; ಮನಸ್ಸಿನ ಪರಿವರ್ತನೆ ಅತ್ಯಗತ್ಯ ಎಂಬುದನ್ನು ಅವರು ಸ್ಪಷ್ಟಪಡಿಸಿದರು. ಇತಿಹಾಸದಲ್ಲಿ ಶೋಷಿತ ವರ್ಗಗಳ ಪರವಾಗಿ ಧ್ವನಿ ಎತ್ತಿದ ಮಹನೀಯರು ಎದುರಿಸಿದ ಸಂಕಷ್ಟಗಳನ್ನು ಸ್ಮರಿಸಿ, ಸಮಾನತೆಯ ಹೋರಾಟ ಇನ್ನೂ ಪೂರ್ಣಗೊಳ್ಳಬೇಕಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೇರ್‌ಟೇಕರ್‌ಗಳಾದ ದೇವಮ್ಮ, ಕೃಷ್ಣ, ಸಿದ್ರಾಮ್, ಅಮೃತ ಸೇರಿದಂತೆ ಆಶ್ರಯ ಕೇಂದ್ರದ ನಿವಾಸಿಗಳಾದ ಪಟೇಲ್ ಸಾಬ್, ಬಾಲಪ್ಪ, ಮುನ್ನಾ, ಭುವನ್ ಮತ್ತು ಇತರರು ಭಾಗವಹಿಸಿ, ಅಂಬೇಡ್ಕರ್ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ ಮಾಡಿದರು.

ಈ ಸಮಾರಂಭವು ಆಶ್ರಯ ಕೇಂದ್ರದ ವಾತಾವರಣವನ್ನು ಹೊಸ ಚೈತನ್ಯದಿಂದ ತುಂಬಿ, ಮಾನವೀಯ ಮೌಲ್ಯಗಳ ಪ್ರತಿಧ್ವನಿಯಾಗಿ ಮೂಡಿಬಂದಿತು.

# ಫ್ಯಾಷನ್ ಡಿಸೈನಿಂಗ್ ಟೆಲರ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವ-ಉದ್ಯೋಗವನ್ನು ಸ್ಥಾಪಿಸಲು ಆಸಕ್ತ ಪರಿಶಿಷ್ಟ ಪಂಗಡದ ಮಹಿಳೆಯರಿಗೆ ಉಚಿತವಾಗಿ 4 ವಾರಗಳ ಫ್ಯಾಷನ್ ಡಿಸೈನಿಂಗ್ ಟೆಲರಿಂಗ್ ವಲಯಾಧಾರಿತ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಕಾರ್ಯಕ್ರಮವು ರಾಯಚೂರು ಹಾಗೂ ಮಾನವಿಯಲ್ಲಿ ಹಮ್ಮಿಕೊಳ್ಳಲಾಗಿದೆ. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು, ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.

ರಾಯಚೂರು ಜಿಲ್ಲೆಯ ಆಸಕ್ತ ಪರಿಶಿಷ್ಟ ಪಂಗಡದ ಮಹಿಳಾ ಅಭ್ಯರ್ಥಿಗಳು 18 ವರ್ಷ ದಿಂದ 35 ವರ್ಷ ವಯಸ್ಸಿನವರಾಗಿರಬೇಕು. ಕನಿಷ್ಠ ಹತ್ತನೇ ತರಗತಿ ಪಾಸಾಗಿರಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರು ಏಪ್ರಿಲ್ 17ರೊಳಗಾಗಿ ಮೊಬೈಲ್ ಸಂಖ್ಯೆ: 9986600631 ಅಥವಾ 7899881410ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅಥವಾ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ನವೀನ ಆಸ್ಪತ್ರೆ ಪಕ್ಕದಲ್ಲಿ, ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತಮ ಕಾವ್ಯದಿಂದ ಸಮಾಜದ ಪ್ರಗತಿ ಸಾಧ್ಯ:ಸಾಹಿತಿ ಪ್ರೊ. ಎ. ಎಚ್. ಕೊಳಮಲಿ



**ವಿಜಯಪುರ, ಏ. 14:**ಯುವ ಕವಿಗಳು ಹೆಚ್ಚು ಓದಿನತ್ತ ಒಲವು ತೋರಿಸಬೇಕು. ಶ್ರೇಷ್ಠ ಸಾಹಿತಿಗಳ ಕಥೆ, ಕಾದಂಬರಿ, ಸಾಹಿತ್ಯ ಕೃತಿಗಳನ್ನು ಓದಿದಾಗ ಜ್ಞಾನ ವೃದ್ಧಿಗೊಂಡು ಗಟ್ಟಿತನದ ಸಾಹಿತ್ಯವನ್ನು ರಚಿಸಲು ಸಾಧ್ಯ, ಕಾವ್ಯಕ್ಕೆ ಅದ್ಭುತವಾದ ಶಕ್ತಿಯಿದೆ. ಉತ್ತಮ ಕಾವ್ಯದಿಂದ ಸಮಾಜದ ಪ್ರಗತಿ ಸಾಧ್ಯ ಎಂದು ಸಾಹಿತಿ ಪ್ರೊ ಎ. ಎಚ್. ಕೊಳಮಲಿ ಹೇಳಿದರು.
ರವಿವಾರ ಸಂಜೆ ದರ್ಬಾರ ಹೈಸ್ಕೂಲ್ ಮೈದಾನದಲ್ಲಿ ವಿಜಯಪುರ ಸಾಹಿತ್ಯ ಬಳಗ ಹಾಗೂ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ನಡೆದ ಬುದ್ಧ, ಬಸವ, ಅಂಬೇಡ್ಕರ ಪುಸ್ತಕ ಮೇಳದಲ್ಲಿ ಯುವ ಕವಿಗೋಷ್ಠಿಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಬುದ್ಧ, ಬಸವ, ಅಂಬೇಡ್ಕರ್ ಅವರು ಈ ದೇಶದ ಅಮೂಲ್ಯ ರತ್ನಗಳು. ದೇಶಕ್ಕೆ ಅವರ ಕೊಡುಗೆ ಅಪಾರ. ಅವರ ವಿಚಾರಧಾರೆಗಳು ಮನುಕುಲವನ್ನು ಉದ್ಧಾರ ಮಾಡಿವೆ. ಯುವ ಪೀಳಿಗೆ ಹೆಚ್ಚೆಚ್ಚು ದೇಶದ ಮಹಾನ ಚೇತನರ ಚರಿತ್ರೆಯನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು. ಬದುಕನ್ನು ಕಟ್ಟಿಕೊಡುವ ಸಾಹಿತ್ಯವನ್ನು ರಚಿಸುವಂತಹ ಕವಿಗಳ ಸಂಖ್ಯೆ ಹೆಚ್ಚಾಗಬೇಕೆಂದು ಹೇಳಿದರು.
ಕವಿಗೋಷ್ಠಿಯ ಅಧ್ಯಕ್ಷತೆಯನ್ನು ವಹಿಸಿದ ಪತ್ರಕರ್ತ ಪರಶುರಾಮ ಶಿವಶರಣ ಮಾತನಾಡಿ, ಸಾಹಿತ್ಯ ಎಂದೆಂದಿಗೂ ಸ್ವರಗದೇ ಇರುವ ಸಂಪತ್ತು. ಜಗತ್ತಿನ ಭವಿಷ್ಯ ಯುವಕರ ಮೇಲೆ ನಿಂತಿದೆ. ಯುವಕರು ಸೃಜನಶೀಲ ಸಾಹಿತ್ಯವನ್ನು ರಚಿಸಬೇಕೆಂದು ಹೇಳಿದರು. ಉದಯೋನ್ಮುಖ ಕವಿಗಳಾದ, ಲಾಯಪ್ಪ ಇಂಗಳೆ, ಕಲ್ಲು ಶಿವಶರಣ, ಭರತ ಕುಮಾರ ಸೇರಿದಂತೆ 15 ಕ್ಕೂ ಹೆಚ್ಚು ಕವಿಗಳು ಕವನವನ್ನು ವಾಚಿಸುವದರ ಮುಖೇನ ಸಮಾಜದ ಅವ್ಯವಸ್ಥೆಯ ಬಗ್ಗೆ ಆಕ್ರೋಶವನ್ನು ವ್ಯಕ್ತಪಡಿಸಿದರು.
ಕಾರ್ಯಕ್ರಮದಲ್ಲಿ ಬಸವರಾಜ ಸೂಳಿಬಾವಿ, ಅನಿಲ್ ಹೊಸಮನಿ, ಚನ್ನು ಕಟ್ಟಿಮನಿ, ವೈ. ಎಸ್. ಗುಣಕಿ, ಸಂಘರ್ಷ ಹೊಸಮನಿ, ಸುರೇಶ ಬಿಜಾಪುರ, ಶಿವು ಕಟ್ಟಿಮನಿ, ಕಾಶಿನಾಥ ಕೆ, ಭೋಗೇಶ ಸೋಲಾಪುರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಡಾ. ಅಂಬೇಡ್ಕರ್ ಜಯಂತಿ ಆಚರಣೆ




**ಲಕ್ಷ್ಮೇಶ್ವರ,ಏ14:** ತಾಲೂಕಿನ ಯಳವತ್ತಿ ಗ್ರಾಮ ಪಂಚಾಯಿತಿಯಲ್ಲಿ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135 ನೇ ಜಯಂತೋತ್ಸವವನ್ನು ಆಚರಿಸಲಾಯಿತು.
ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪಿಡಿಓ ಸವಿತಾ ಹುನಗುಂದವರು ಪುಷ್ಪಾರ್ಚನೆ ಮಾಡಿ ಮಾತನಾಡಿ ಅವರು ಭಾರತಕ್ಕೆ ನೀಡಿದ ಸಂವಿಧಾನ ಒಂದು ಮಹಾನ್ ಗ್ರಂಥವಾಗಿದೆ ಸಂವಿಧಾನದಲ್ಲಿನ ಹಕ್ಕು ಮತ್ತು ಕರ್ತವ್ಯಗಳನ್ನು ಅರಿತುಕೊಂಡು ಎಲ್ಲರೂ ಸಂವಿಧಾನಕ್ಕೆ ಬದ್ಧರಾಗಿ ನಡೆಯಬೇಕು ಎಂದರು.
ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸುರೇಶ್ ಬಿರಣ್ಣವರ ಹಾಗೂ ಪಂಚಾಯತಿ ಸಿಬ್ಬಂದಿ ವರ್ಗದವರು ಇದ್ದರು.

## ಪಂಚ ಗ್ಯಾರೆಂಟಿಗಳ ಪ್ರಭಾವ–ಬಾಗಲಕೋಟೆ, ದಾವಣಗೆರೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಜಯ ಅನಿವಾರ್ಯ: ಜಮಾದಾರ ಘೋಷಣೆ



**ಯಾದಗಿರಿ:ಏ.14:** ರಾಜ್ಯ ರಾಜಕೀಯ ಪಟಲದಲ್ಲಿ ತೀವ್ರ ಕುತೂಹಲ ಕೆರಳಿಸಿರುವ ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಗಳ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಪರ ಭಾರೀ ಜನವುನ್ನಣೆ ವ್ಯಕ್ತವಾಗುತ್ತಿದ್ದು, ಎರಡೂ ಕ್ಷೇತ್ರಗಳಲ್ಲಿ ಭರ್ಜರಿ ಜಯ ಕಾಂಗ್ರೆಸ್ ಪಾಲಾಗುವುದು ಶತಸಿದ್ಧ ಎಂದು ಕೆಪಿಸಿಸಿ ಸಂಯೋಜಕ ಹಾಗೂ ಕಿಸಾನ್ ಘಟಕದ ರಾಜ್ಯ ಕಾರ್ಯದರ್ಶಿ ರಾಜ ಮೈನುದ್ದಿನ್ ಎಂ. ಜಮಾದಾರ ದಿಟ್ಟ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಮಾಧ್ಯಮಗಳಿಗೆ ವಿಸ್ತೃತವಾಗಿ ಪ್ರತಿಕ್ರಿಯಿಸಿದ ಅವರು, ನಾವು ಸ್ವತಃ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ನಾಲ್ಕು ಪ್ರಮುಖ ಬೂತ್‌ಗಳಲ್ಲಿ ಚುನಾವಣಾ ಉಸ್ತುವಾರಿಯಾಗಿ ಕಾರ್ಯನಿರ್ವಹಿಸಿದ್ದು, ನೆಲಮಟ್ಟದಲ್ಲಿ ಮತದಾರರ ಮನೋಭಾವವನ್ನು ಸಮಗ್ರವಾಗಿ ಅಳೆಯುವ ಅವಕಾಶ ದೊರಕಿದೆ ಎಂದು ತಿಳಿಸಿದರು. ಪ್ರತಿ ಬೂತ್‌ನಲ್ಲಿಯೂ ಕಾಂಗ್ರೆಸ್ ಪಕ್ಷದ ಪರ ಅದ್ಭುತ ಸ್ಪಂದನೆ ವ್ಯಕ್ತವಾಗಿದ್ದು, ಮತದಾರರು ಸ್ಪಷ್ಟವಾಗಿ ಕಾಂಗ್ರೆಸ್ ಗೆಲುವಿನ ದಿಕ್ಕಿನಲ್ಲಿ ತೀರ್ಮಾನ ಮಾಡಿಕೊಂಡಿದ್ದಾರೆ ಎಂಬುದು ಸ್ಪಷ್ಟವಾಗಿದೆ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ಜಾರಿಗೆ ತಂದ ಪಂಚ ಗ್ಯಾರೆಂಟಿ ಯೋಜನೆಗಳು ಸಾಮಾನ್ಯ ಜನರ ಜೀವನದಲ್ಲಿ ಕ್ರಾಂತಿಕಾರಿ ಬದಲಾವಣೆ ತರಲು ಕಾರಣವಾಗಿದ್ದು, ಬಡವರು, ಮಧ್ಯಮ ವರ್ಗದವರು ಹಾಗೂ ರೈತ ಸಮುದಾಯದವರು ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಹೃದಯಪೂರ್ವಕವಾಗಿ ಸ್ವೀಕರಿಸಿದ್ದಾರೆ ಎಂದು ಅವರು ವಿಶ್ಲೇಷಿಸಿದರು. “ಈ ಗ್ಯಾರೆಂಟಿಗಳು ಕೇವಲ ಭರವಸೆಗಳಲ್ಲ, ಜನಜೀವನದಲ್ಲಿ ನಿಜವಾದ ಪರಿವರ್ತನೆ ತರಲಿರುವ ಶಕ್ತಿಶಾಲಿ ಸಾಧನಗಳಾಗಿವೆ” ಎಂದು ಜಮಾದಾರ ಅಭಿಪ್ರಾಯಪಟ್ಟರು.

ಇದಲ್ಲದೆ, ರಾಜ್ಯದ ನಾಯಕತ್ವದ ವಿಚಾರದಲ್ಲಿಯೂ ಜನತೆ ಸಂಪೂರ್ಣ ತೃಪ್ತಿ ವ್ಯಕ್ತಪಡಿಸುತ್ತಿದ್ದು, ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಆ. ಏ. ಅವರ ಆಡಳಿತ ಶೈಲಿ, ಜನಪರ ನೀತಿಗಳು ಹಾಗೂ ಅಭಿವೃದ್ಧಿ ದೃಷ್ಟಿಕೋನ ಜನಮನ ಗೆದ್ದಿದೆ ಎಂದು ಅವರು ಹೇಳಿದರು. ದಾವಣಗೆರೆ ಕ್ಷೇತ್ರದಲ್ಲಿಯೂ ಅಲ್ಪಸಂಖ್ಯಾತ ಸಮುದಾಯ ಸೇರಿದಂತೆ ವಿವಿಧ ವರ್ಗದ ಮತದಾರರು ಕಾಂಗ್ರೆಸ್ ಪಕ್ಷದ ಪರ ಏಕಮನಸ್ಕವಾಗಿ ನಿಂತಿದ್ದಾರೆ ಎಂಬುದು ಸ್ಪಷ್ಟವಾಗಿದೆ ಎಂದು ತಿಳಿಸಿದ್ದಾರೆ.

ಉಪಚುನಾವಣೆಯ ಸಮರದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆ ಬಲಿಷ್ಠವಾಗಿದ್ದು, ಕಾರ್ಯಕರ್ತರ ಸಮನ್ವಯ ಮತ್ತು ಉತ್ಸಾಹವು ಗೆಲುವಿನ ದಾರಿಯನ್ನು ಇನ್ನಷ್ಟು ಬಲಪಡಿಸಿದೆ. ನೆಲಮಟ್ಟದ ಕಾರ್ಯಕರ್ತರಿಂದ ಹಿಡಿದು ಉನ್ನತ ಮಟ್ಟದ ನಾಯಕತ್ವದವರೆಗೆ ಎಲ್ಲರೂ ಸಮನ್ವಯದಿಂದ ಕೆಲಸ ಮಾಡುತ್ತಿರುವುದು ಪಕ್ಷದ ಜಯಕ್ಕೆ ಪೂರಕವಾಗಿದೆ ಎಂದು ಅವರು ಹೇಳಿದರು.

ಈ ಎಲ್ಲ ಅಂಶಗಳನ್ನು ಸಮಗ್ರವಾಗಿ ಪರಿಗಣಿಸಿದಾಗ, ಬಾಗಲಕೋಟೆ ಹಾಗೂ ದಾವಣಗೆರೆ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಸ್ಪಷ್ಟ ಬಹುಮತದೊಂದಿಗೆ ಜಯ ಸಾಧಿಸುವುದು ಕೇವಲ ಸಾಧ್ಯತೆ ಅಲ್ಲ, ಅನಿವಾರ್ಯ ಸತ್ಯವಾಗಿದೆ ಎಂದು ರಾಜ ಮೈನುದ್ದಿನ್ ಎಂ. ಜಮಾದಾರ ಅವರು ದೃಢವಾಗಿ ಘೋಷಿಸಿದ್ದಾರೆ.

## 45 ವರ್ಷಗಳಿಂದ ಉಚಿತ ಸೇವೆ–ಹೆಡಗಿಮುದ್ರಾ ಗ್ರಾಮದ ‘ಡಾ. ಹೊನ್ನಪ್ಪ’ ಜನಮನ ಗೆದ್ದ ಜನಸೇವಕ



**ಯಾದಗಿರಿ: ಏ.14:**ಜಿಲ್ಲೆಯ ಹೆಡಗಿಮುದ್ರಾ ಗ್ರಾಮದಲ್ಲಿ ವೈದ್ಯಕೀಯ ಸೇವೆಯನ್ನು ವೃತ್ತಿಯಷ್ಟೇ ಅಲ್ಲ, ಸೇವೆಯ ರೂಪವಾಗಿ ಕಾಣಿಸಿಕೊಂಡಿರುವ ಡಾ. ಹೊನ್ನಪ್ಪ ಅವರು ಅಪಾರ ಜನಮೆಚ್ಚುಗೆಗೆ ಪಾತ್ರರಾಗಿದ್ದಾರೆ. ನಾಡಿ, ನರ, ಕೀಲು ಹಾಗೂ ಮೂಳೆ ಸಂಬಂಧಿತ ಸಮಸ್ಯೆಗಳಿಗೆ ವಿಶಿಷ್ಟ ಚಿಕಿತ್ಸೆ ನೀಡುವ ತಜ್ಞರಾಗಿ ಅವರು ಗ್ರಾಮೀಣ ಭಾಗದಲ್ಲಿ ತಮ್ಮದೇ ಆದ ಗುರುತನ್ನು ನಿರ್ಮಿಸಿಕೊಂಡಿದ್ದಾರೆ.

ಗ್ರಾಮಸ್ಥರು ಪ್ರೀತಿಯಿಂದ “ಡಾಕ್ಟರ್ ಹೊನ್ನಪ್ಪ” ಎಂದೇ ಕರೆಸಿಕೊಳ್ಳುವ ಅವರು, ಕಳೆದ ಸುಮಾರು 45 ವರ್ಷಗಳಿಂದ ಯಾವುದೇ ಶುಲ್ಕ ಪಡೆಯದೇ ಜನರಿಗೆ ಉಚಿತ ಚಿಕಿತ್ಸೆ ನೀಡುತ್ತಿರುವುದು ವಿಶೇಷ. ಬಡವರು, ಹಿಂದುಳಿದವರು ಸೇರಿದಂತೆ ಸಾವಿರಾರು ಜನರಿಗೆ ಆರೋಗ್ಯದ ಆಶಾಕಿರಣವಾಗಿ ಅವರು ಹೊರಹೊಮ್ಮಿದ್ದಾರೆ.

ಹೆಡಗಿಮುದ್ರಾ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳು ಹಾಗೂ ಇತರ ಜಿಲ್ಲೆಗಳಿಂದಲೂ ರೋಗಿಗಳು ಇವರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವುದು ಅವರ ಸೇವೆಯ ಮಹತ್ವವನ್ನು ಮತ್ತಷ್ಟು ಎತ್ತಿ ಹಿಡಿಯುತ್ತದೆ.

ಕುಟುಂಬದ ವಿಷಯದಲ್ಲಿ ನೋಡಿದರೆ, ಅವರಿಗೆ ನಾಲ್ವರು ಗಂಡು ಮಕ್ಕಳು ಹಾಗೂ ಇಬ್ಬರು ಹೆಣ್ಣು ಮಕ್ಕಳು ಇದ್ದಾರೆ. ಇವರಲ್ಲಿ ಮಗ ಚಂದ್ರು (ಚಂದು) ಅವರು ತಂದೆಯ ಸೇವಾ ಮಾರ್ಗವನ್ನು ಮುಂದುವರಿಸಿಕೊಂಡು ಚಿಕಿತ್ಸಾ ಕಾರ್ಯದಲ್ಲಿ ಕೈಜೋಡಿಸುತ್ತಿದ್ದಾರೆ.

ಮಾನವೀಯತೆ ಮತ್ತು ಸೇವಾ ಮನೋಭಾವದಿಂದ ತುಂಬಿದ ಡಾ. ಹೊನ್ನಪ್ಪ ಅವರ ಸೇವೆ ಯಾದಗಿರಿ ಜಿಲ್ಲೆಯ ಹೆಮ್ಮೆ ಆಗಿದ್ದು, ಸಮಾಜದಲ್ಲಿ ನಿಜವಾದ ವೈದ್ಯಕೀಯ ಸೇವೆಯ ಅರ್ಥವನ್ನು ಪ್ರತಿಪಾದಿಸುತ್ತಿದೆ.

## ಜಮಖಂಡಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ 135ನೇ ಜಯಂತಿ ಆಚರಣೆ

**ಜಮಖಂಡಿ:ಏ.14:** ನಗರದ ತಾಲೂಕಾಡಳಿತ ಸೌಧದ ತಹಶಿಲ್ದಾರ ಸಭಾಭವನದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಶ್ರದ್ಧಾ–ಭಕ್ತಿಯಿಂದ ಆಚರಿಸಲಾಯಿತು.

ತಾಲೂಕಾಡಳಿತ, ತಾಲೂಕು ಪಂಚಾಯತ್, ನಗರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಶ್ಯಾಮರಾವ ಘಾಟಗೆ ಮಾತನಾಡಿ, ಡಾ. ಅಂಬೇಡ್ಕರ್ ಅವರ ಜೀವನ ಮತ್ತು ಹೋರಾಟವನ್ನು ಸ್ಮರಿಸಿದರು. ಜಾತಿ ವ್ಯವಸ್ಥೆಯ ವಿರುದ್ಧ ಅವರು ನಡೆಸಿದ ಹೋರಾಟ ಮತ್ತು ಸಮಾನತೆಯ ಸಂದೇಶವನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. “ಶಿಕ್ಷಣ, ಸಂಘಟನೆ ಮತ್ತು ಹೋರಾಟ” ಎಂಬ ಅವರ ತತ್ವಗಳು ಇಂದಿಗೂ ಯುವಕರಿಗೆ ದಾರಿದೀಪವಾಗಿವೆ ಎಂದು ಹೇಳಿದರು.

ದಲಿತ ಮುಖಂಡ ಯಮನಪ್ಪ ಗುಣದಾಳ ಮಾತನಾಡಿ, ಅಂಬೇಡ್ಕರ್ ಅವರು ಕೇವಲ ದಲಿತರಿಗಾಗಿ ಮಾತ್ರವಲ್ಲ, ಇಡೀ ದೇಶದ ಜನರ ಹಕ್ಕುಗಳಿಗಾಗಿ ಹೋರಾಟ ನಡೆಸಿದ ಮಹಾನ್ ನಾಯಕರು ಎಂದರು. ದೇಶದ ಸಂವಿಧಾನವನ್ನು ರಚಿಸುವಲ್ಲಿ ಅವರು ಮಾಡಿದ ತ್ಯಾಗ ಅಪಾರವಾಗಿದೆ. ಸಂವಿಧಾನದ ಅರಿವು ವಿದ್ಯಾರ್ಥಿಗಳಲ್ಲಿ ಬಾಲ್ಯದಿಂದಲೇ ಮೂಡಬೇಕು ಎಂದು ಅವರು ಅಭಿಪ್ರಾಯಪಟ್ಟರು.



ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಮಾತನಾಡಿ, ಡಾ. ಅಂಬೇಡ್ಕರ್ ಅವರು ಕೇವಲ ಭಾರತ ರತ್ನವಲ್ಲ, ವಿಶ್ವ ರತ್ನ ಎಂದು ಹೇಳಿದರು. ಅವರ ತತ್ವ–ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ದೇಶ ಅಭಿವೃದ್ಧಿ ದಾರಿಗೆ ಸಾಗುತ್ತದೆ ಎಂದು ತಿಳಿಸಿದರು. ಸಂವಿಧಾನದ ಅರಿವು ಪ್ರತಿಯೊಬ್ಬರಿಗೂ ಅಗತ್ಯ ಎಂದು ಅವರು ಒತ್ತಿಹೇಳಿದರು.

ಕಾರ್ಯಕ್ರಮದ ನಂತರ ನಗರದ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಗೆ ವಿವಿಧ ಇಲಾಖೆ ಅಧಿಕಾರಿಗಳು, ದಲಿತ ಮುಖಂಡರು ಹಾಗೂ ಗಣ್ಯರು ಪುಷ್ಪನಮನ ಸಲ್ಲಿಸಿದರು.

## ಸಂವಿಧಾನದ ಆಶಯಗಳನ್ನು ಪ್ರತಿಯೊಬ್ಬರೂ ಪಾಲಿಸಿ : ಶಾಸಕ ಲಕ್ಷ್ಮಣ ಸವದಿ

**ಅಥಣಿ :ಏ.14:** ಸಂವಿಧಾನ ಶಿಲ್ಪಿ. ಭಾರತರತ್ನ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಬದುಕು. ಆದರ್ಶಗಳು ಹಾಗೂ ಸಮಾನತೆಯ ಚಿಂತನೆಗಳು ಇಂದಿಗೂ ಎಲ್ಲರಿಗೂ ಸ್ಪೂರ್ತಿದಾಯಕ. ಅವರ ಆದರ್ಶಗಳಾದ ಶಿಕ್ಷಣ, ಸಂಘಟನೆ, ಹೋರಾಟ, ಸಮಾನತೆ, ಮತ್ತು ಸಂವಿಧಾನದ ಗೌರವವನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಅವರ ಪುತ್ಥಳಿಗೆ ಸೋಮವಾರ ಮಾಲಾರ್ಪಣೆ ಮಾಡಿ ಕಲಾವಿದ ವಿನಾಯಕ ಸುತಾರ ನೂಲಿನ ದಾರದ ಸಹಾಯದಿಂದ ತಮ್ಮ ಕೌಶಲ್ಯದ ಮೂಲಕ ಚಿತ್ರಿಸಿದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರ ಅನಾವರಣಗೊಳಿಸಿ ಮಾತನಾಡಿದರು. ಡಾ.ಬಿ.ಆರ್. ಅಂಬೇಡ್ಕರ್ ದೂರದೃಷ್ಟಿಯಿಂದ ಮೂಡಿಬಂದಿರುವ ಸಂವಿಧಾನದ ಆಶಯಗಳಾದ ಸೌಹಾರ್ದತೆ, ಸಮಾನತೆ ಮತ್ತು ಜಾತ್ಯತೀತತೆಯನ್ನು ಪಾಲಿಸುವ ಮೂಲಕ ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕನು ಬದ್ದನಾಗಿರಬೇಕು. ವಿಶ್ವಕ್ಕೆ ಮಾದರಿಯಾಗಿರುವ ಸಂವಿಧಾನ ನಮ್ಮದು. ಹಲವು ಜಾತಿ ಧರ್ಮಗಳು ಇರುವ ನಮ್ಮ ದೇಶಕ್ಕೆ ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ತತ್ವದ ಅಡಿ ಅಂಬೇಡ್ಕರ್ ಅವರು ಎಲ್ಲ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಒದಗಿಸಿದ್ದಾರೆ ಎಂದು ಹೇಳಿದರು.

ಅಂಬೇಡ್ಕರ್ ಕೇವಲ ಒಂದು ಜನಾಂಗಕ್ಕೆ ಸೀಮಿತರಾಗದೆ, ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಗೌರವಯುತ ಬದುಕು ಕಟ್ಟಿಕೊಳ್ಳಲು ಸಂವಿಧಾನ ರಚಿಸಿದರು. ಸಂವಿಧಾನದ ಆಶಯಗಳನ್ನು ಪ್ರತಿಯೊಬ್ಬರು ಅನುಸರಿಸುವ ಮೂಲಕ ಸುಭದ್ರ ರಾಷ್ಟ್ರದ ನಿರ್ಮಾಣಕ್ಕೆ ಕೈ ಜೋಡಿಸಬೇಕು ಎಂದು ಕರೆ ನೀಡಿದರು. ಎಂದರು

ಕಲಾವಿದ ವಿನಾಯಕ ಸುತಾರ ತಮ್ಮ ಕೌಶಲ್ಯದ ಮೂಲಕ ನೂಲಿನ ದಾರದ ಸಹಾಯದಿಂದ ಭಾರತರತ್ನ ಅಂಬೇಡ್ಕರ್ ಅವರ ಭಾವಚಿತ್ರವನ್ನು ಸುಂದರವಾಗಿ ಚಿತ್ರಿಸಿದ್ದಾರೆ ಎಂದು



ಪ್ರಶಂಸೆ ವ್ಯಕ್ತಪಡಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಯುವ ಮುಖಂಡ ಚಿದಾನಂದ ಸವದಿ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದತ್ತ ವಾಸ್ಟರ್, ಪುರಸಭೆ ಸದಸ್ಯ ಪ್ರಮೋದ ಬಿಳ್ಳೂರ. ಕಲ್ಲೇಶ ಮಡ್ಡಿ, ಬಾಬು ಖೇಮಲಾಪುರ. ಗೌತಮ್ ಪರಾಂಜಪೆ. ಸುಕುಮಾರ ಕಾಂಬಳೆ. ಸಂತೋಷ ಬಿದರಿ, ಶ್ರೀನಿವಾಸ ಪಟ್ಟಣ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಶ್ರದ್ಧೆ ಹಾಗೂ ಆತ್ಮವಿಶ್ವಾಸವೇ ಯಶಸ್ಸಿನ ಮೂಲಮಂತ್ರ: ಮಾತಾಜಿ ಕೈವಲ್ಯಮಯಿ



**ವಿಜಯಪುರ, ಏ. 14:** ಮಾನವನ ಜೀವನದಲ್ಲಿ ಗುರಿ ತಲುಪಲು ಶ್ರದ್ಧೆ ಅತ್ಯಗತ್ಯ. ಯಾರಲ್ಲಿ ಶ್ರದ್ಧೆ ಇರುತ್ತದೆಯೋ ಅವರು ಜೀವನದ ಪ್ರತಿ ಹಂತದಲ್ಲೂ ವಿಜಯಶಾಲಿಗಳಾಗುತ್ತಾರೆ ಎಂದು ವಿಜಯಪುರದ ಕೃಪಾಮಯಿ ಶಾರದಾಶ್ರಮದ ಪರಮಪೂಜ್ಯ ಕೈವಲ್ಯಮಯಿ ಮಾತಾಜಿಯವರು ಅಭಿಮತ ವ್ಯಕ್ತಪಡಿಸಿದರು.

ವಿಜಯಪುರ ಜಿಲ್ಲೆಯ ಕನ್ನೂರಿನ ಶಾಂತಿ ಕುಟೀರ ಆಶ್ರಮದಲ್ಲಿ ಶಾಂತಿ ಕುಟೀರ ಟ್ರಸ್ಟ್ ಹಾಗೂ ಭಾರತೀಯ ಸ್ವರಾಜ್ಯ ಸಂಸ್ಥೆ ಮತ್ತು ಸಂಡೂರಿನ ಶ್ರೀ ಶೈಲೇಶ್ವರ ವಿದ್ಯಾ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಒಂದು ತಿಂಗಳ ಉಚಿತ ಶೈಕ್ಷಣಿಕ ಹಾಗೂ ಆಧ್ಯಾತ್ಮಿಕ ಬೇಸಿಗೆ ಶಿಬಿರದ ಉದ್ಘಾಟನಾ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ವಿದ್ಯಾರ್ಥಿ ದೆಸೆಯಲ್ಲಿ ಆತ್ಮವಿಶ್ವಾಸ ಎನ್ನುವುದು ಬೆನ್ನೆಲುಬಿನಂತೆ. ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಮೈಗೂಢಿಸಿಕೊಂಡು ಸವಾಲುಗಳನ್ನು ಎದುರಿಸುವ ಧೈರ್ಯ ಬೆಳೆಸಿಕೊಳ್ಳಬೇಕು. ಕೇವಲ ಅಂಕ ಗಳಿಕೆಯಷ್ಟೇ ಜೀವನವಲ್ಲ. ಸಂಸ್ಕಾರವಂತ ವ್ಯಕ್ತಿತ್ವ ರೂಪಿಸಿಕೊಂಡಾಗ ಮಾತ್ರ ಸದೃಢ ದೇಶ ನಿರ್ಮಾಣ ಸಾಧ್ಯ ಎಂದರು.ಪ್ರಸ್ತುತ ಕಾಲಘಟ್ಟದಲ್ಲಿ ಸದ್ಗುರುಗಳ ಸನ್ನಿಧಾನದಲ್ಲಿ ನಡೆಯುತ್ತಿರುವ ಇಂತಹ ಶಿಬಿರಗಳು ಕೇವಲ ಪಾಠವನ್ನಷ್ಟೇ ಅಲ್ಲದೆ, ಬದುಕುವ ಕಲೆಯನ್ನು ಕಲಿಸುತ್ತಿವೆ ಎಂದು ಅವರು ಶ್ಲಾಘಿಸಿದರು.ಕಾರ್ಯಕ್ರಮವನ್ನು ಉದ್ಘಾಟಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿ ಭಾರತಿ ಮನವಳ್ಳಿ ಪಾಟೀಲ ಮಾತನಾಡಿ, ಶಿಲ್ಪಿಯು ಕಲ್ಲಿನಲ್ಲಿ ಸುಂದರ ಮೂರ್ತಿಯನ್ನು ಕಂಡರೆ, ಶಿಕ್ಷಕರು ಮಕ್ಕಳಲ್ಲಿ ಭವ್ಯ ಭವಿಷ್ಯವನ್ನು ಕಾಣುತ್ತಾರೆ. ನೂರಾರು ಬಡ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ, ವಾಹನ ಸೌಕರ್ಯ ಹಾಗೂ ನೈತಿಕ ಮೌಲ್ಯಗಳನ್ನು ಒದಗಿಸುತ್ತಿರುವ ಶಾಂತಿ ಕುಟೀರದ ಸೇವೆ ಅನನ್ಯ ಎಂದು ಬಣ್ಣಿಸಿದರು.ರಾಮರಾಜ್ಯ ಕಲಾ ಮೇಳದ ಅಧ್ಯಕ್ಷ ಶ್ರೀಕೃಷ್ಣ ಸಂಪಗಾಂವಕರ ಪ್ರಾಸ್ತಾವಿಕವಾಗಿ ಮಾತನಾಡಿ, ಶ್ರೀ ಸದ್ಗುರು ಸಮರ್ಥ ಗಣಪತರಾವ ಮಹಾರಾಜರ ಆಶಯದಂತೆ 2002ರಲ್ಲಿ ಸಂಡೂರಿನ ಶ್ರೀಶೈಲೇಶ್ವರ ವಿದ್ಯಾ ಕೇಂದ್ರದ ಸಂಸ್ಥಾಪಕ ದಿವಂಗತ ಎಸ್. ವಿ. ನಾನಾವಟೆ ಗುರುಗಳಿಂದ ಆರಂಭಗೊಂಡ ಈ ಶಿಬಿರವು ಇಂದಿಗೂ ಅವಿರತವಾಗಿ ಸಾಗುತ್ತಿದೆ.

ಈ ಶಿಬಿರದಲ್ಲಿ ಪಾಲ್ಗೊಳ್ಳುವ ಶಿಬಿರಾರ್ಥಿಗಳಿಗೆ ಗಣಿತ, ವಿಜ್ಞಾನ, ಇಂಗ್ಲಿಷ್ ಜೊತೆಗೆ ಅಬಾಕಸ್, 1ರಿಂದ 99 ರ ವರೆಗೆ ಮಗ್ಗಿ ಹಾಗೂ ಶುದ್ಧ ಬರವಣಿಗೆಗೆ ಆದ್ಯತೆ,ಅಗಸ್ತ್ಯ ಫೌಂಡೇಶನ್ ವತಿಯಿಂದ ವಿಜ್ಞಾನ ಪ್ರಾತ್ಯಕ್ಷಿಕೆ ಹಾಗೂ ಆರೋಗ್ಯ ತಪಾಸಣೆ, ವಿದ್ಯಾರ್ಥಿಗಳನ್ನು ಮಾನಸಿಕವಾಗಿ ಸದೃಢಗೊಳಿಸಲು ಹಾಗೂ ದೈಹಿಕವಾಗಿ ಸದೃಢಗೊಳಿಸಲು ಕ್ರೀಡೆಗಳನ್ನು ಆಡಿಸಲಾಗುತ್ತದೆ. ಸ್ವದೇಶಿ ವಸ್ತುಗಳ ಜಾಗೃತಿ ಹಾಗೂ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಮಾರ್ಗದರ್ಶನ. ಶಿಕ್ಷಣ ತಜ್ಞರಿಂದ ಪಾಲಕರ ಸಭೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಮಾರಂಭದಲ್ಲಿ ಭಾರತೀಯ ಸುರಾಜ್ಯ ಸಂಸ್ಥೆಯ ಗೌರವಾಧ್ಯಕ್ಷ ಬಿ. ಬಿ. ಪೂಜಾರ ಮಾತನಾಡಿದರು. ಗುರು ಮನೆತನದ ಹಿರಿಯರಾದ ರಮೇಶ ಕನ್ನೂರ ಅಧ್ಯಕ್ಷೀಯ ನುಡಿಗಳನ್ನಾಡಿದರು.

ಈ ಸಂದರ್ಭದಲ್ಲಿ ಅಜಿತ ಕನ್ನೂರ, ಶ್ರೀನಿವಾಸ ಕುಲಕರ್ಣಿ, ತಿಕೋಟಿ, ವಿ.ಡಿ. ಪಾಟೀಲ ಸೇರಿದಂತೆ ಆಶ್ರಮದ ನಿವಾಸಿಗಳು, ಶಿಕ್ಷಕ ವೃಂದ ಹಾಗೂ ನೂರಾರು ಶಿಬಿರಾರ್ಥಿಗಳು ಮತ್ತು ಪಾಲಕರು ಉಪಸ್ಥಿತರಿದ್ದರು.

## ಇಂದು ಪಿಂಚಣಿದಾರರಿಂದ ನಿರಶನ



**ವಿಜಯಪುರ, ಏ. 14:**ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಏ. 15ರಂದು ಪಿಂಚಣಿದಾರರು ಉಪವಾಸ ಸತ್ಯಾಗ್ರಹ ನಡೆಸಲು ನಿರ್ಧರಿಸಿದ್ದಾರೆ.

ಪಿಂಚಣಿದಾರರ ಕಚೇರಿಯಲ್ಲಿ ಈಚೆಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ರಾಷ್ಟ್ರೀಯ ಅಧ್ಯಕ್ಷ ಕಮಾಂಡರ್ ಅಶೋಕ ರಾವುತ್ ಅವರು ಮಾತನಾಡಿ, ಏ. 15ರಂದು ಬೆಳಿಗ್ಗೆ 10–30 ರಿಂದ ಮಧ್ಯಾಹ್ನ 1 ಗಂಟೆವರೆಗೆ ವಿಜಯಪುರದ ಅಂಬೇಡ್ಕರ್ ವೃತ್ತದಲ್ಲಿ ಸಾಂಕೇತಿಕವಾಗಿ ಒಂದು ದಿನದ ಉಪವಾಸ ಸತ್ಯಾಗ್ರಹ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಬೃಹತ್ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಕಾರ್ಮಿಕ ಮಂತ್ರಿ ಮನ್ಸೂಕ್ ಮಾಂಡೇವಿಯ ಅವರಿಗೆ ಮನವಿ ಸಲ್ಲಿಸಲಾಗುವದು ಎಂದು ಹೇಳಿದರು.

ಈಗಾಗಲೇ ತಿಳಿದಿರುವಂತೆ ಮಾ. 30 ರಂದು ಲೋಕಸಭೆಯಲ್ಲಿ ನಡೆದ ಪ್ರಶ್ನೋತ್ತರ ವೇಳೆಯಲ್ಲಿ ಕೇಂದ್ರ ಹಣಕಾಸು ಮಂತ್ರಿ ನಿರ್ಮಲಾ ಸೀತಾರಾಮನ್ ಅವರು ಸದನಕ್ಕೆ ಉತ್ತರಿಸಿದಂತೆ ಇಪಿಎಸ್–95 ಪಿಂಚಣಿದಾರರ ಬೇಡಿಕೆಯನ್ನು ಈಡೇರಿಸಲು ಸರಕಾರ ವಿವಿಧ ಇಲಾಖೆಗಳ ಜೊತೆ ಮಾತುಕತೆ ನಡೆದಿದ್ದು, ಪರಿಶೀಲಿಸಲಾಗುತ್ತಿದೆ. ಶೀಘ್ರದಲ್ಲೇ ಇತ್ಯರ್ಥ ಪಡಿಸುತ್ತೇವೆ ಎಂದು ತಿಳಿಸಿದ್ದಾರೆ. ಹಾಗಾಗಿ ಇದೇ ಲೋಕಸಭಾ ಅಧಿವೇಶನದಲ್ಲಿ ನಮ್ಮ ಬೇಡಿಕೆ ಈಡೇರಿಸಲೇಬೇಕೆಂಬ ಒತ್ತಾಯ ಮಾಡಲು ಈ ಸಾಂಕೇತಿಕ ಉಪವಾಸ ಮಾಡಲು ನಿರ್ಧಾರಿಸಲಾಗಿದೆ ಎದವರು ಸಭೆಗೆ ತಿಳಿಸಿದ್ದಾರೆ.

ಈ ಅರ್ಹ ಪಿಂಚಣಿ ಪಡೆಯಲು ಎಲ್ಲಾ ವಿಜಯಪುರ, ಬಾಗಲಕೋಟೆ ಹಾಗೂ ಬೆಳಗಾವಿ ಪಿಂಚಣಿದಾರರು ಈ ಉಪವಾಸ ಸತ್ಯಾಗ್ರಹದಲ್ಲಿ ಭಾಗವಹಿಸಲು ಸಭೆಯಲ್ಲಿ ಕೋರಲಾಗಿದೆ ಎಂದು ತಿಳಿಸಿದರು.

ಯಾರು ದಿಲ್ಲಿ ಹಾಗೂ ಬೆಂಗಳೂರಿನಲ್ಲಿ ನಡೆದಿದ್ದ ಪ್ರತಿಭಟನೆಗೆ ಭಾಗವಹಿಸಲು ಸಾಧ್ಯವಾಗಿಲ್ಲವೋ ಅವರೆಲ್ಲರೂ ಸಹ ಈ ಪ್ರತಿಭಟನೆಯಲ್ಲಿ ಭಾಗವಹಿಸಿ ಬಡ ಪಿಂಚಣಿದಾರರಿಗೆ ನ್ಯಾಯ ದೊರಕಿಸಿ ಕೊಡುತ್ತೀರೆಂದು ಮನವಿ ಮಾಡಿದರು. ಈ ಪುಣ್ಯ ಕಾರ್ಯದಲ್ಲಿ ಭಾಗಿಯಾಗುವವರೇ ನಿಜವಾದ ಹೋರಾಟಗಾರರು ಕಾರಣ. ನೀವು ನಿಮ್ಮ ಸ್ನೇಹಿತ ಪಿಂಚಣಿದಾರರನ್ನು ಕರೆದುಕೊಂಡು ಬನ್ನಿರಿ ಎಂದರು.

ಈ ಪ್ರತಿಭಟನೆಯಲ್ಲಿ ಅಖಿಲ ಕರ್ನಾಟಕದ ರಾಜ್ಯ ಕಾರ್ಯಾಧ್ಯಕ್ಷ ವೀರಕುಮಾರ ಗಡಾದ, ರಾಜ್ಯ ಉಪಾಧ್ಯಕ್ಷ ಚನ್ನಬಸಯ್ಯ, ಅನಿಲ್ ಇನಾಮದಾರ್ ಹಾಗೂ ರಾಷ್ಟ್ರ ಹಾಗೂ ರಾಜ್ಯ ನಾಯಕರು ಭಾಗವಹಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಶಾಂತಿನಾಥ ಪಾಟೀಲ್, ಗೋಪಾಲ ಬಿರಾದಾರ, ಬಿ. ಆರ್. ರಜಪೂತ, ಗುಂಡು ಸಂತನಾಳ, ಐ. ಎ. ಮುಶ್ರೀಫ ಮತ್ತಿತರರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE